ಸಂಪುಟ: 06 ಸಂಚಿಕೆ: 102 ಪುಟಗಳು: 08 ಗುರುವಾರ 25 ಜೂನ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಎಲ್ಲಾ ಕೆಲಸಗಳನ್ನು ಖುಷಿಯ ಆಟವೆಂಬಂತೆ ಮಾಡಬೇಕು. ಆಟವೇ ಕೆಲಸವಾಗದಂತೆ ಎಚ್ಚರದಿಂದ ಗೆಲ್ಲೋಣ

## ದೇವನಹಳ್ಳಿ ಭೂಸ್ವಾಧೀನ: ಎಕರೆಗೆ 2.70 ಕೋಟಿ ಪರಿಹಾರಕ್ಕೆ ಶಿಫಾರಸು

• ಉದಯವಾಹಿನಿ,ಬೆಂಗಳೂರು

ದೇವನಹಳ್ಳಿಯಲ್ಲಿ ಭೂಸ್ವಾಧೀನಪಡಿಸಿಕೊಂಡ 120 ಎಕರೆ ಜಮೀನಿಗೆ ಪ್ರತಿ ಎಕರೆಗೆ 2.70 ಕೋಟಿ ರೂ. ಪರಿಹಾರ ನೀಡುವಂತೆ ಭೂದರ ನಿರ್ಧಾರಣಾ ಸಲಹಾ ಸಮಿತಿ ಕೆಐಎಡಿಬಿಗೆ ಶಿಫಾರಸು ಮಾಡಿದೆ.

ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಹೋಬಳಿಯ ಗೋಕರೆಬಚ್ಚೇನಹಳ್ಳಿ ಮತ್ತು ಹ್ಯಾಡಾಳ ಗ್ರಾಮದಲ್ಲಿ ಕೈಗಾರಿಕಾ ಉದ್ದೇಶಕ್ಕೆ ರೈತರು ಸ್ವಯಂಪ್ರೇರಿತವಾಗಿ ಬಿಟ್ಟುಕೊಡಲು ಒಪ್ಪಿರುವ 120 ಎಕರೆ ಪ್ರತಿ ಎಕರೆಗೆ 2.70 ಕೋಟಿ ರೂ. ಪರಿಹಾರ ನೀಡುವಂತೆ ಭೂದರ ನಿರ್ಧಾರಣಾ ಸಲಹಾ ಸಮಿತಿ ಕೆಐಎಡಿಬಿಗೆ ಶಿಫಾರಸು ಮಾಡಿದೆ. ಕೆಐಎಡಿಬಿ ವಿಶೇಷ ಜಿಲ್ಲಾಧಿಕಾರಿ ಎ.ಎನ್.ರಘುನಂದನ್ ಅಧ್ಯಕ್ಷತೆಯಲ್ಲಿ ಅರವಿಂದ ಭವನದಲ್ಲಿ ನಡೆದ ಅಧಿಕಾರಿಗಳು ಹಾಗೂ ಭೂಮಾಲೀಕರ ಜಂಟಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಕೆಐಎಡಿಬಿ ಮಂಡಳಿಯ ಅನುಮೋದನೆಗಾಗಿ ಕಳಿಸಿ ಕೊಡಲಾಗುವುದು.

## ಮತ್ತೆ ಸುಪ್ರೀಂ ಮೆಟ್ಟಿಲೇರಿದ ದರ್ಶನ್ ಒಂದು ವರ್ಷ ಜಾಮೀನು ಅರ್ಜಿ ಸಲ್ಲಿಸದಂತೆ ನೀಡಿದ್ದ ಆದೇಶ ಮಾರ್ಪಾಡಿಗೆ ಮನವಿ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಮತ್ತೊಮ್ಮೆ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದಾರೆ. ಒಂದು ವರ್ಷದವರೆಗೂ ಜಾಮೀನು ಕೋರಿ ಅರ್ಜಿ ಸಲ್ಲಿಸದಂತೆ ನೀಡಿದ ಆದೇಶವನ್ನು ಮಾರ್ಪಾಡುವಂತೆ ಮನವಿ ಮಾಡಿದ್ದಾರೆ. ಬದಲಾದ ವಕೀಲರ ಮೂಲಕ ಅರ್ಜಿ ಸಲ್ಲಿಸಿರುವ ಅವರು, ವೈಯಕ್ತಿಕ ಸ್ವಾಂತಂತ್ರ್ಯ ಮತ್ತು ತ್ವರಿತ ವಿಚಾರಣೆಯ ಹಕ್ಕು ಸಂವಿಧಾನದ ಆರ್ಟಿಕಲ್ 21 ಅಡಿಯಲ್ಲಿ ರಕ್ಷಿತವಾಗಿದೆ. ಹೀಗಾಗೀ ತುರ್ತು ಪರಿಸ್ಥಿತಿಗಳಿಗೆ ಅನ್ವಯವಾಗುವಂತೆ ಆದೇಶ ಬದಲಿಸಬೇಕು. ಒಂದು ವರ್ಷದೊಳಗೆ ಜಾಮೀನು ಅರ್ಜಿ ಸಲ್ಲಿಸಲು ಅವಕಾಶ ಇಲ್ಲ ಎಂದು ನ್ಯಾಯಲಯ ಹೇಳಿದೆ.

ಆದರೆ ಈ ಆದೇಶದಿಂದ ಟ್ರಯಲ್ ಇನ್ನಷ್ಟು ವಿಳಂಬವಾಗಬಹುದು. ಜೊತೆಗೆ ವೈದ್ಯಕೀಯ ತುರ್ತು ಪರಿಸ್ಥಿತಿ ಮತ್ತು ಮಾನವೀಯ ನೆಲೆಗಳಲ್ಲಿ ಜಾಮೀನು ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಕೇಳಿದ್ದಾರೆ. ವೈಯಕ್ತಿಕ ಸ್ವಾಂತಂತ್ರ್ಯ ಮತ್ತು ತ್ವರಿತ ವಿಚಾರಣೆಯ ಹಕ್ಕು ಸಂವಿಧಾನದ ಆರ್ಟಿಕಲ್ 21 ಅಡಿಯಲ್ಲಿ ರಕ್ಷಿತವಾಗಿದೆ.

ದೀರ್ಘಾವಧಿಯ ಬಂಧನವನ್ನು ಕಾಲಕಾಲಕ್ಕೆ ನ್ಯಾಯಾಲಯ ಪರಿಶೀಲಿಸಬೇಕು. ದೀರ್ಘ ಬಂಧನದಿಂದ ತಮ್ಮ ವೃತ್ತಿಜೀವನ, ಜೀವನೋಪಾಯ ಮತ್ತು ಕುಟುಂಬಕ್ಕೆ ತೀವ್ರ ಹಾನಿಯಾಗಿದೆ. ತಾಯಿ ಗಂಭೀರ ಆರೋಗ್ಯ ಸಮಸ್ಯೆ ಹೊಂದಿದ್ದಾರೆ.

ಒಂದು ವರ್ಷ ಜಾಮೀನು ನೀಡದಿರುವ ಆದೇಶ ವ್ಯಾಪಕ ಪರಿಣಾಮ ಬೀರಬಹುದು ಎಂದಿದ್ದಾರೆ. ಒಂದು ವರ್ಷದ ತನಕ ಜಾಮೀನು ಕೋರಿ ಅರ್ಜಿ ಸಲ್ಲಿಸದಂತೆ ನೀಡಿರುವ ಆದೇಶ ಮಾರ್ಪಾಡು ಮಾಡಬೇಕು.

## ಕರ್ನಾಟಕದಲ್ಲಿ ಖರ್ಗೆ ಕುಟುಂಬದಿಂದ 100 ಕೋಟಿ ಮೌಲ್ಯದ ಸರ್ಕಾರಿ ಭೂಮಿ ಲೂಟಿ'; ಬಿಜೆಪಿಯಿಂದ ಗಂಭೀರ ಆರೋಪ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಅವರ ಕುಟುಂಬದ ಒಡೆತನದ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ ಕರ್ನಾಟಕದಲ್ಲಿ ನಿಯಮ ಬಾಹಿರವಾಗಿ ಭೂಮಿ ಹಂಚಿಕೆ ಮಾಡಲಾಗಿದೆ ಎಂದು ಬಿಜೆಪಿ ಭ್ರಷ್ಟಾಚಾರದ ಆರೋಪ ಮಾಡಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಕುಟುಂಬಸ್ಥರು ಮುನ್ನಡೆಸುತ್ತಿರುವ ಖಾಸಗಿ ಟ್ರಸ್ಟ್‌ಗೆ ಕರ್ನಾಟಕದಲ್ಲಿ 100 ಕೋಟಿ ರೂ. ಮೌಲ್ಯದ ಪ್ರಮುಖ ಸರ್ಕಾರಿ ಜಮೀನನ್ನು ನಿಯಮ ಉಲ್ಲಂಘಿಸಿ ಹಂಚಿಕೆ ಮಾಡಲಾಗಿದೆ ಎಂದು ಬಿಜೆಪಿ ಆರೋಪಿಸಿದೆ. ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಾಯಕರು ಖರ್ಗೆ ಕುಟುಂಬದ ವಿರುದ್ಧ ಅಧಿಕಾರ ದುರುಪಯೋಗ ಮತ್ತು ಭೂ ಅಕ್ರಮದ ಆರೋಪಗಳನ್ನು ಹೊರಿಸಿದ್ದಾರೆ.

ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಪಕ್ಷದ ರಾಷ್ಟ್ರೀಯ ವಕ್ತಾರ ಪ್ರದೀಪ್ ಭಂಡಾರಿ ಅವರು ಖರ್ಗೆ ಕುಟುಂಬದ ವಿರುದ್ಧದ ಮೂರು ಪ್ರಮುಖ ಭೂ ಹಗರಣಗಳ ವಿವರಗಳನ್ನು ಬಿಡುಗಡೆ ಮಾಡಿದ್ದಾರೆ. ಪ್ರದೀಪ್ ಭಂಡಾರಿ ಅವರ ಪ್ರಕಾರ, 'ಸಿದ್ಧಾರ್ಥ ವಿಹಾರ್ ಟ್ರಸ್ಟ್'ನಲ್ಲಿ ಕೇವಲ ಖರ್ಗೆ ಕುಟುಂಬದ ಸದಸ್ಯರು ಮಾತ್ರ ಇದ್ದಾರೆ. ''ಸಿದ್ಧಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ, ಅವರ ಪುತ್ರ ಪ್ರಿಯಾಂಕ್ ಖರ್ಗೆ, ಖರ್ಗೆ ಅವರ ಅಳಿಯ ಮತ್ತು ಅವರ ಧರ್ಮಪತ್ನಿ ಸದಸ್ಯರಾಗಿದ್ದಾರೆ. ಇಡೀ ಕುಟುಂಬವೇ ಸೇರಿಕೊಂಡು ತಮ್ಮ ರಾಜಕೀಯ ಪ್ರಭಾವ ಹಾಗೂ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರ್ನಾಟಕದ ವಿವಿಧೆಡೆ ಬಡವರ ಭೂಮಿಯನ್ನು ಲೂಟಿ ಮಾಡಿದೆ ಎಂದು ಪ್ರದೀಪ್ ಭಂಡಾರಿ ಆರೋಪಿಸಿದ್ದಾರೆ.

## ಬೆಂಗಳೂರಲ್ಲಿ ಕಸದ ಗಾಡಿಗಳ ಟ್ರ್ಯಾಕ್‌ಗೆ ಹೊಸ ರೂಟ್ ಕೋರಮಂಗಲದಲ್ಲಿ ಪ್ರಾಯೋಗಿಕ ಆ್ಯಪ್‌ಗೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಸದ ಗಾಡಿಗಳ ಕಳ್ಳಾಟ ಬಟಾಬಯಲಾಗಿದೆ. ಶೇ.50ರಷ್ಟು ಕಸದ ಗಾಡಿಗಳು ಫೀಲ್ಡ್‌ಗೆ ಇಳಿಯದೇ ಇದ್ರೂ, ಬಿಲ್ ಮಾತ್ರ ಲೂಟಿ ಮಾಡುತ್ತಿದ್ದಾರೆ. ಹೀಗೆ ಅಡ್ಡದಾರಿಯಲ್ಲಿ ದುಡ್ಡು ಮಾಡಲು ನಿಂತವರು ರೆಡ್ ಹ್ಯಾಂಡ್ ಆಗಿ ತಗ್ಲಾಕ್ಕೊಂಡಿದ್ದಾರೆ. ಈ ಕಳ್ಳಾಟಕ್ಕೆ ಬ್ರೇಕ್ ಹಾಕಲು ಜಿಬಿಎ ಮಾಸ್ಟರ್ ಪ್ಲ್ಯಾನ್ ಮಾಡುತ್ತಿದೆ. ಬೆಂಗಳೂರಿನಲ್ಲಿ ಕಸದ ಗಾಡಿಗಳ ಕಳ್ಳಾಟಕ್ಕೆ ಜನರೇ ಸುಸ್ತಾಗಿದ್ದಾರೆ.

ಜಿಬಿಎ ಅಧಿಕಾರಿಗಳಿಗೆ ಈ ಕಳ್ಳಾಟ ಗೊತ್ತಿಲ್ಲದ ವಿಚಾರವಲ್ಲ. ಆದರೆ ಇದುವರೆಗೆ ಸೈಲೆಂಟ್ ಆಗಿದ್ದ ಅಧಿಕಾರಿಗಳು ಈಗ ಅಲರ್ಟ್ ಆಗಿದ್ದಾರೆ. ಆಟೋಗಳ ಮೇಲೆ ನಿಗಾ ಇಡಲು ಕೋರಮಂಗಲದಲ್ಲಿ ಪ್ರಾಯೋಗಿಕವಾಗಿ ಆ್ಯಪ್ ಬಳಕೆಗೆ ಚಾಲನೆ ಕೊಟ್ಟಿದ್ದಾರೆ.



# ಟ್ರಂಪ್‌ಗೆ ಬಿಗ್ ಶಾಕ್

### ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನಲ್ಲೂ ಒಪ್ಪಿಗೆ

ಈ ತಿಂಗಳ ಆರಂಭದಲ್ಲಷ್ಟೇ ಸಂಸತ್ತಿನ ಕೆಳಮನೆಯಾದ 'ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್' (ಪ್ರತಿನಿಧಿಗಳ ಸಭೆ) ಈ ನಿರ್ಣಯವನ್ನು ಅಂಗೀಕರಿಸಿತ್ತು. ಕೆಳಮನೆಯಲ್ಲೂ ೨೧೫-೨೦೮ ಮತಗಳ ಅಲ್ಪ ಅಂತರದಿಂದ ವಿಧೇಯಕ ಪಾಸ್ ಆಗಿತ್ತು. ಅಲ್ಲಿಯೂ ಸಹ ನಾಲ್ವರು ರಿಪಬ್ಲಿಕನ್ ಸದಸ್ಯರು ವಿಪಕ್ಷ ಡೆಮಾಕ್ರಾಟ್‌ಗಳ ಪರವಾಗಿ ನಿಂತಿದ್ದರು. ಪ್ರಸ್ತುತ ಉಭಯ ಸದನಗಳಲ್ಲಿ ರಿಪಬ್ಲಿಕನ್ ಪಕ್ಷವೇ ಅಲ್ಪ ಬಹುಮತ ಹೊಂದಿದ್ದರೂ, ಸ್ವಪಕ್ಷೀಯರೇ ಅಧ್ಯಕ್ಷರ ನಿರ್ಧಾರದ ವಿರುದ್ಧ ಸಿಡಿದಿದ್ದಿರುವುದು ಶ್ವೇತಭವನದ ಆತಂಕಕ್ಕೆ ಕಾರಣವಾಗಿದೆ.

• ಉದಯವಾಹಿನಿ, ವಾಷಿಂಗ್ಟನ್

ಇರಾನ್ ಜತೆಗಿನ ಯುದ್ಧದ ವಿಚಾರದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತಕ್ಕೆ ಭಾರಿ ರಾಜಕೀಯ ಹಿನ್ನಡೆಯಾಗಿದೆ. ಇರಾನ್ ವಿರುದ್ಧದ ಸಂಘರ್ಷವನ್ನು ಅಧ್ಯಕ್ಷರು ಮುಂದುವರೆಸದಂತೆ ತಡೆಯುವ ಪ್ರಮುಖ ನಿರ್ಣಯವೊಂದನ್ನು ಅಮೆರಿಕದ ಸಂಸತ್ತಿನ ಮೇಲ್ಮನೆಯಾದ ಸೆನೆಟ್ ಅಂಗೀಕರಿಸಿದೆ. ಟ್ರಂಪ್ ಅವರ ಪಕ್ಷವಾದ ರಿಪಬ್ಲಿಕನ್ ಪಕ್ಷವೇ ಸೆನೆಟ್‌ನಲ್ಲಿ ಬಹುಮತ ಹೊಂದಿದ್ದರೂ, ಅವರದೇ ಪಕ್ಷದ ನಾಲ್ವರು ಶಾಸಕರು ಟ್ರಂಪ್ ವಿರುದ್ಧ ಮತ ಚಲಾಯಿಸಿರುವುದು ಈ ಆಘಾತಕ್ಕೆ ಕಾರಣವಾಗಿದೆ. ಸೆನೆಟ್‌ನಲ್ಲಿ ಈ ನಿರ್ಣಯವು 50-48 ಮತಗಳ ಅಲ್ಪ ಅಂತರದಿಂದ ಅಂಗೀಕಾರಗೊಂಡಿದೆ. ಇದಕ್ಕೂ ಮುನ್ನ ಕೆಳಮನೆಯಾದ 'ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್'ನಲ್ಲೂ ಇದು 215-208 ಮತಗಳಿಂದ ಪಾಸ್ ಆಗಿತ್ತು.

ಟ್ರಂಪ್ ವಿರುದ್ಧ ಮತ ಹಾಕಿದ ಸ್ವಪಕ್ಷೀಯರು ಯಾರು? ಸುಸಾನ್ ಕಾಲಿನ್ಸ್, ಲಿಸಾ ಮುರ್ಕೋವ್ಸ್ಕಿ, ಬಿಲ್ ಕ್ಯಾಸಿಡಿ ಮತ್ತು ರಾಂಡ್ ಪಾಲ್ ಎಂಬ ನಾಲ್ವರು ರಿಪಬ್ಲಿಕನ್ ಸೆನೆಟರ್‌ಗಳು ಅಧ್ಯಕ್ಷ ಟ್ರಂಪ್ ನಿಲುವಿನ ವಿರುದ್ಧವಾಗಿ ನಿರ್ಣಯದ ಪರ ಮತ ಚಲಾಯಿಸಿದರು. ಡೇವ್ ಮೆಕ್‌ಕಾರ್ಮಿಕ್ ಮತ್ತು ಮಿಚ್ ಮೆಕ್ ಕಾನ್ನೆಲ್ ಎಂಬ ಇಬ್ಬರು ಪ್ರಮುಖ ರಿಪಬ್ಲಿಕನ್ ನಾಯಕರು ಸಭೆಗೆ ಗೈರಾಗಿದ್ದು ಬಂಡಾಯ ಬಣಕ್ಕೆ ಜಯ ತಂದುಕೊಟ್ಟಿತು.

ಆದರೆ, ವಿರೋಧ ಪಕ್ಷವಾದ ಡೆಮಾಕ್ರಾಟ್‌ನ ಜಾನ್ ಫೆಟರ್‌ಮ್ಯಾನ್ ಮಾತ್ರ ಟ್ರಂಪ್ ಆಡಳಿತವನ್ನು ಬೆಂಬಲಿಸಿ ನಿರ್ಣಯದ ವಿರುದ್ಧ ಮತ ಹಾಕಿದ್ದು ವಿಶೇಷವಾಗಿತ್ತು. ಈ ನಿರ್ಣಯ ಸೆನೆಟ್‌ನಲ್ಲಿ ಅಂಗೀಕಾರವಾಗಿದ್ದರೂ, ಪ್ರಸ್ತುತ ಪರಿಸ್ಥಿತಿಯಲ್ಲಿ ಇದು ಅಧ್ಯಕ್ಷ ಟ್ರಂಪ್‌ಗೆ ಕೇವಲ ರಾಜಕೀಯ ಮುಜುಗರ ತರಲಿದೆಯೇ ಹೊರತು ಕಾನೂನಾತ್ಮಕವಾಗಿ ಯುದ್ಧದ ಮೇಲೆ ಯಾವುದೇ ಪರಿಣಾಮ ಬೀರಲ್ಲ. ಅಮೆರಿಕದ ಸಂವಿಧಾನದ ಪ್ರಕಾರ, ಇಂತಹ 'ಏಕಕಾಲಿಕ ನಿರ್ಣಯಗಳು ಅಧ್ಯಕ್ಷರ ಅಂತಿಮ ಅನುಮೋದನೆಗೆ ಹೋಗುವುದಿಲ್ಲ ಮತ್ತು ಇವುಗಳಿಗೆ ಕಡ್ಡಾಯ ಕಾನೂನಿನ ಬಲ ಇರುವುದಿಲ್ಲ. ಇದು ಕೇವಲ ಸರ್ಕಾರದ ನಿರ್ಧಾರದ ವಿರುದ್ಧ ಸಂಸತ್ತು ಹೊಂದಿರುವ ಅಸಮಾಧಾನದ ಪ್ರದರ್ಶನವಷ್ಟೇ ಆಗಿರುತ್ತದೆ.

ಅಮೆರಿಕ ಮತ್ತು ಇರಾನ್ ನಡುವೆ 3 ತಿಂಗಳಿಗೂ ಹೆಚ್ಚು ಕಾಲ ನಡೆದಿದ್ದ ಯುದ್ಧವು ಈಗಾಗಲೇ ಕಳೆದ ಏಪ್ರಿಲ್ 7 ರಂದೇ ಕದನ ವಿರಾಮದೊಂದಿಗೆ ಕೊನೆಗೊಂಡಿದೆ.

ಅಮೆರಿಕ-ಇರಾನ್ ಶಾಂತಿ ಒಪ್ಪಂದ ಮತ್ತು ಪರಮಾಣು ಕಿಡಿ ಇತ್ತೀಚೆಗಷ್ಟೇ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಡಿಜಿಟಲ್ ಮೂಲಕ ಐತಿಹಾಸಿಕ ಶಾಂತಿ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ. ಆದರೂ ಇರಾನ್‌ನ ಪರಮಾಣು ಕಾರ್ಯಕ್ರಮದ ವಿವಾದ ಇನ್ನೂ ಜೀವಂತವಾಗಿದೆ.

ಇರಾನ್ ತನ್ನ ಪರಮಾಣು ಕೇಂದ್ರಗಳ ತಪಾಸಣೆಗೆ ಒಪ್ಪದಿದ್ದರೆ ಮಾತುಕತೆ ನಿಲ್ಲಿಸುವುದಾಗಿ ಟ್ರಂಪ್ ಎಚ್ಚರಿಸಿದ್ದಾರೆ.

ಅಂತಾರಾಷ್ಟ್ರೀಯ ಪರಮಾಣು ಸಂಸ್ಥೆ ಪ್ರಕಾರ, ಇರಾನ್ ಬಳಿ ಬಾಂಬ್ ತಯಾರಿಸಲು ಬೇಕಾದ ಯುರೇನಿಯಂ ಇರುವುದು ಜಾಗತಿಕ ಆತಂಕಕ್ಕೆ ಕಾರಣವಾಗಿದೆ.

**1** ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ಇರಾನ್ ಮಿಲಿಟರಿ ಕಾರ್ಯಾಚರಣೆ ವಿರೋಧಿಸಿ

**2** ಸ್ವಪಕ್ಷದ ನಾಯಕರಿಂದಲೇ ಟ್ರಂಪ್‌ಗೆ ಭಾರಿ ಮುಜುಗರ

**3** ಈ ನಿರ್ಣಯ ಅಸಂವಿಧಾನಿಕವಾಗಿದ್ದು, ಕಾನೂನುಬದ್ದವಲ್ಲ

### ಡೊನಾಲ್ಡ್ ಟ್ರಂಪ್‌ಗೆ ಭಾರೀ ಹಿನ್ನಡೆ

**ಹೋರಾಟದ ಹಾದಿ ಹಿಡಿಯಲಿರುವ ಶ್ವೇತಭವನ**

ಈ ಮತದಾನವು ಸದ್ಯಕ್ಕೆ ಸಾಂಕೇತಿಕ ಎಂಬಂತೆ ಕಂಡುಬಂದರೂ, ಇರಾನ್ ಜೊತೆ ಶಾಂತಿ ಮಾತುಕತೆ ನಡೆಸಲು ಮುಂದಾಗಿರುವ ಟ್ರಂಪ್ ಆಡಳಿತಕ್ಕೆ ಇದು ರಾಜತಾಂತ್ರಿಕವಾಗಿ ತೀವ್ರ ಮುಜುಗರ ತಂದಿದೆ. 'ವಾರ್ ಪವರ್ಸ್ ಆಕ್ಟ್' ಅಡಿಯಲ್ಲಿ ಈ ವಿಧೇಯಕವು ಅಧ್ಯಕ್ಷರ ಸಹಿಗಾಗಿ ಶ್ವೇತಭವನಕ್ಕೆ ಹೋಗುವುದಿಲ್ಲ. ಆದರೆ, ಈ ವಿಧೇಯಕವು ಸಂವಿಧಾನಬಾಹಿರವಾಗಿದ್ದು, ಇದು ನಮಗೆ ಬದ್ಧವಾಗಿಲ್ಲ ಎಂದು ಶ್ವೇತಭವನ ಈಗಾಗಲೇ ಪಟ್ಟು ಹಿಡಿದಿದೆ. ತಜ್ಞರ ಪ್ರಕಾರ, ಕಾರ್ಯನಿರ್ವಾಹಕ ಮಂಡಳಿಯು (ಶ್ವೇತಭವನ) ಸಾಂವಿಧಾನಿಕ ಕಾರಣಗಳನ್ನು ನೀಡಿ ಇದನ್ನು ನಿರ್ಲಕ್ಷಿಸುವ ಸಾಧ್ಯತೆಯಿದ್ದು, ಮುಂದಿನ ದಿನಗಳಲ್ಲಿ ಈ ವಿವಾದವು ಸುಪ್ರೀಂ ಕೋರ್ಟ್ ಮೆಟ್ಟಿಲೇರುವ ಸಾಧ್ಯತೆಯಿದೆ ಎನ್ನಲಾಗಿದೆ.

### ಶ್ವೇತಭವನದ ನಡುವೆ ಹೆಚ್ಚುತ್ತಿರುವ ಸಂಘರ್ಷ

ರಾಷ್ಟ್ರೀಯ ಭದ್ರತೆ ಮತ್ತು ಅಮೆರಿಕದ ಹಿತಾಸಕ್ತಿಗಳನ್ನು ರಕ್ಷಿಸಲು ಅಗತ್ಯವಿದ್ದಾಗ ಮಿಲಿಟರಿ ಕ್ರಮ ಕೈಗೊಳ್ಳಲು ಅಧ್ಯಕ್ಷರು ಸಾಂವಿಧಾನಿಕ ಅಧಿಕಾರವನ್ನು ಹೊಂದಿದ್ದಾರೆ ಎಂದು ಟ್ರಂಪ್ ಆಡಳಿತವು ಸಮರ್ಥಿಸುತ್ತದೆ. ಪ್ರಸ್ತುತ ಪರಿಸ್ಥಿತಿಗಳ ನಡುವೆ ಅಧ್ಯಕ್ಷರು ತೆಗೆದುಕೊಂಡ ಕ್ರಮಗಳು ಸಂಪೂರ್ಣವಾಗಿ ಸಾಂವಿಧಾನಿಕವಾಗಿವೆ ಮತ್ತು ಹೆಚ್ಚುವರಿ ಕಾಂಗ್ರೆಸ್ಸಿನ ಅಧಿಕಾರದ ಅಗತ್ಯವಿಲ್ಲ ಎಂದು ಆಡಳಿತವು ಪ್ರತಿಪಾದಿಸುತ್ತದೆ. ಏತನ್ಮಧ್ಯೆ, ಟ್ರಂಪ್ ಆಡಳಿತವು ಇರಾನ್‌ನೊಂದಿಗೆ ಸಮಗ್ರ ಶಾಂತಿ ಒಪ್ಪಂದವನ್ನು ಜಾರಿಗೆ ತರುವತ್ತ ಸಾಗುತ್ತಿದೆ. ಎರಡು ರಾಷ್ಟ್ರಗಳ ನಡುವೆ ಒಪ್ಪಂದಕ್ಕೆ ಬರಲಾಗಿದೆ ಮತ್ತು ಈ ಉದ್ದೇಶಕ್ಕಾಗಿ ಇತ್ತೀಚೆಗೆ ಸ್ವಿಟ್ಜರ್‌ಲ್ಯಾಂಡ್‌ನ ಜಿನೀವಾದಲ್ಲಿ ಮಹತ್ವದ ಸಭೆ ನಡೆಯಿತು. ಪ್ರಸ್ತುತ ಕದನ ವಿರಾಮ ಜಾರಿಯಲ್ಲಿದೆ ಮತ್ತು ಹಲವಾರು ವಿಷಯಗಳ ಬಗ್ಗೆ ಒಮ್ಮತ ಮೂಡಿದೆ. ರಾಜಕೀಯ ವಿಶ್ಲೇಷಕರು ನಿರ್ಣಯವು ಕಾನೂನುಬದ್ಧವಾಗಿಲ್ಲದಿದ್ದರೂ, ಅದು ಅಪಾರ ರಾಜಕೀಯ ಮಹತ್ವವನ್ನು ಹೊಂದಿದೆ ಎಂದು ನಂಬುತ್ತಾರೆ.

ಫೆಬ್ರವರಿ 28ರಂದು ಆರಂಭವಾದ ಇರಾನ್ ವಿರುದ್ಧದ ಈ ಯುದ್ಧವು ಅಮೆರಿಕದ ನಾಗರಿಕರಲ್ಲಿ ತೀವ್ರ ಅಸಮಾಧಾನ ಮೂಡಿಸಿತ್ತು. ಈ ಹಿನ್ನೆಲೆಯಲ್ಲಿ ಅಮೆರಿಕ ಸಂಸತ್ತಿನ ಉಭಯ ಸದನಗಳು ಶಸ್ತ್ರಸಜ್ಜಿತ ಪಡೆಗಳನ್ನು ಹಿಂಪಡೆಯುವಂತೆ ಅಧ್ಯಕ್ಷರಿಗೆ ಆದೇಶಿಸುವ ಜಂಟಿ ನಿರ್ಣಯವನ್ನು ಅಂಗೀಕರಿಸಿರುವುದು ಇತಿಹಾಸದಲ್ಲೇ ಇದೇ ಮೊದಲು ಎನ್ನಲಾಗಿದೆ. 1973ರ 'ವಾರ್ ಪವರ್ಸ್ ಆಕ್ಟ್' (ಯುದ್ಧ ಅಧಿಕಾರ ಕಾಯ್ದೆ) ಅಡಿಯಲ್ಲಿ ಈ ಐತಿಹಾಸಿಕ ಹೆಜ್ಜೆ ಇಡಲಾಗಿದೆ. ಸೆನೆಟ್‌ನಲ್ಲಿ ನಡೆದ ಮತದಾನದಲ್ಲಿ ಈ ನಿರ್ಣಯದ ಪರವಾಗಿ 50 ಹಾಗೂ ವಿರುದ್ಧವಾಗಿ 48 ಮತಗಳು ಚಲಾವಣೆಯಾದವು. ಆಡಳಿತಾರೂಢ ರಿಪಬ್ಲಿಕನ್ ಪಕ್ಷದ ನಾಲ್ವರು ಸೆನೆಟರ್‌ಗಳು ಅಧ್ಯಕ್ಷ ಟ್ರಂಪ್ ನಿಲುವಿನ ವಿರುದ್ಧವಾಗಿ ಡೆಮಾಕ್ರಾಟ್‌ಗಳ ಜೊತೆಗೂಡಿ ಮತ ಚಲಾಯಿಸಿರುವುದು ಟ್ರಂಪ್ ಸರ್ಕಾರಕ್ಕೆ ದೊಡ್ಡ ಹಿನ್ನಡೆ ಎಂದೇ ಪರಿಗಣಿಸಲಾಗಿದೆ.

**ಇತಿಹಾಸದಲ್ಲೇ ಇದೇ ಮೊದಲು; ಟ್ರಂಪ್‌ಗೆ ಬಿದ್ದ ಮೂಗುದಾರ**

### ಇರಾನ್ ವಿರುದ್ಧ ಟ್ರಂಪ್ ಗುಡುಗು

■ ಇರಾನ್ ವಿರುದ್ಧದ ಯುದ್ಧ ನಿಲ್ಲಿಸಲು ಅಮೆರಿಕ ಸೆನೆಟ್ ಐತಿಹಾಸಿಕ ನಿರ್ಣಯ! ■ ಇರಾನ್ ವಿರುದ್ಧದ ಮಿಲಿಟರಿ ಕ್ರಮ ತಡೆಯುವ ನಿರ್ಣಯಕ್ಕೆ ಅಂಗೀಕಾರ!



### 4 ರಿಪಬ್ಲಿಕನ್ ಸೆನೆಟರ್‌ಗಳ ಮತ

ಸೆನೆಟ್‌ನಲ್ಲಿ ಬಹುತೇಕ ಎಲ್ಲಾ ಡೆಮಾಕ್ರಾಟಿಕ್ ನಾಯಕರು ಮತ ಹಾಕಿದ್ದು, ಗಮನಾರ್ಹವಾಗಿ ಟ್ರಂಪ್ ನೇತೃತ್ವದ ರಿಪಬ್ಲಿಕನ್ ಪಕ್ಷದ 4 ಮತಗಳಿಂದಾಗಿ ಸದ್ಯ ಟ್ರಂಪ್ ಆಡಳಿತಕ್ಕೆ ಸೆನೆಟ್‌ನಲ್ಲಿ ಹಿನ್ನಡೆಯಾಗಿದೆ. ಟ್ರಂಪ್ ಮಿಲಿಟರಿ ಕಾರ್ಯಾಚರಣೆ ವಿರುದ್ಧ ಸೆನೆಟ್‌ನಲ್ಲಿ ರಿಪಬ್ಲಿಕನ್ ಸೆನೆಟರ್‌ಗಳಾದ ಅಲಾಸ್ಕಾದ ರಿಪಬ್ಲಿಕನ್ ಸೆನೆಟರ್ ಲಿಸಾ ಮುರ್ಕೋವ್ಸ್ಕಿ, ಮೈನೆಯ ಸುಸಾನ್ ಕಾಲಿನ್ಸ್, ಕೆಂಟುಕಿಯ ರಾಂಡ್ ಪಾಲ್ ಮತ್ತು ಲೂಸಿಯಾನದ ಬಿಲ್ ಕ್ಯಾಸಿಡಿ. ಒಬ್ಬ ಡೆಮೋಕ್ರಾಟ್, ಪೆನ್ಸಿಲ್ವೇನಿಯಾದ ಸೆನೆಟರ್ ಜಾನ್ ಫೆಟರ್‌ಮ್ಯಾನ್ ಮತಚಲಾಯಿಸಿದ್ದಾರೆ.

## ಸಾಮಾನ್ಯ ಸ್ಥಿತಿಗೆ ಮರಳಿದ ನಮ್ಮ ಮೆಟ್ರೋ ನೇರಳೆ ಮಾರ್ಗದ ಸಂಚಾರ

## ಪೀಕ್ ಅವರ್‌ನಲ್ಲಿ ಸಮಸ್ಯೆಯುಂಟಾದ ಪರಿಣಾಮ ಸಾವಿರಾರು ಪ್ರಯಾಣಿಕರು ಲಾರಿ, ಗೂಡ್ಸ್ ವಾಹನಗಳನ್ನು ಹತ್ತಿ ತೆರಳುವಂತಾಗಿತ್ತು

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ನೇರಳೆ ಮಾರ್ಗದ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣದಲ್ಲಿ ಉಂಟಾಗಿದ್ದ ತಾಂತ್ರಿಕ ದೋಷವನ್ನು ಬಿಎಂಆರ್‌ಸಿಎಲ್‌ನ ಕಾರ್ಯಾಚರಣೆ ಮತ್ತು ನಿರ್ವಹಣಾ ತಂಡಗಳು ಯಶಸ್ವಿಯಾಗಿ ಸರಿಪಡಿಸಿವೆ. ಬೆಳಗ್ಗೆ 5 ಗಂಟೆಯಿಂದಲೇ ನೇರಳೆ ಮಾರ್ಗದಾದ್ಯಂತ ಮೆಟ್ರೋ ರೈಲು ಸಂಚಾರ ನಿಯಮಿತ ವೇಳಾಪಟ್ಟಿಯಂತೆ ಪುನರಾರಂಭಗೊಂಡಿದ್ದು, ಪ್ರಯಾಣಿಕರ ಆತಂಕ ದೂರವಾಗಿದೆ.

ನೇರಳೆ ಮಾರ್ಗದ ಕಬ್ಬನ್ ಪಾರ್ಕ್ ನಿಲ್ದಾಣದ ಬಳಿ ಮೆಟ್ರೋ 'ಥರ್ಡ್ ರೈಲ್ ಸಿಸ್ಟಮ್‌ನ ಕರೆಂಟ್ ಕಲೆಕ್ಟರ್ ಶೂನಲ್ಲಿ ತಾಂತ್ರಿಕ ದೋಷವುಂಟಾಗಿತ್ತು. ಇದರಿಂದಾಗಿ ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್‌ನಿಂದ ಎಂ.ಜಿ ರಸ್ತೆ ನಡುವಿನ ಪ್ರಮುಖ ನಿಲ್ದಾಣಗಳ ನಡುವೆ ರೈಲುಗಳ ಸಂಚಾರದಲ್ಲಿ ವ್ಯತ್ಯಯವುಂಟಾಗಿತ್ತು. ಪೀಕ್ ಅವರ್‌ನಲ್ಲಿ ಸಮಸ್ಯೆಯುಂಟಾದ ಪರಿಣಾಮ ಸಾವಿರಾರು ಪ್ರಯಾಣಿಕರು ಲಾರಿ, ಗೂಡ್ಸ್ ವಾಹನಗಳನ್ನು ಹತ್ತಿ ತೆರಳುವಂತಾಗಿತ್ತು. ರೈಲಿನೊಳಗೆ ಸಿಲುಕಿದ್ದ ಜನರನ್ನು ಅರ್ಧ ಗಂಟೆಯ ಬಳಿಕ ಕೆಳಗಿಳಿಸಲಾಗಿತ್ತು. ರಾತ್ರಿ ಕೊನೆಯ ರೈಲಿನ ಸಮಯ ಮುಗಿದರೂ ಸಹ ದುರಸ್ತಿ ಕಾರ್ಯಾಚರಣೆ ಮುಂದುವರೆಸಿದ ಬಿಎಂಆರ್‌ಸಿಎಲ್‌ನ ಕಾರ್ಯಾಚರಣೆ ಮತ್ತು ನಿರ್ವಹಣಾ ತಂಡಗಳು ಮುಂಜಾನೆ 3.30ರ ಸುಮಾರಿಗೆ ಬಗೆಹರಿಸಿವೆ. ತಾತ್ಕಾಲಿಕ ಸೇವಾ ವ್ಯತ್ಯಯದ ಸಂದರ್ಭದಲ್ಲಿ ತಾಳ್ಮೆ, ಸಹಕಾರ ಹಾಗೂ ತಿಳುವಳಿಕೆಯನ್ನು ಪ್ರದರ್ಶಿಸಿದ ಎಲ್ಲಾ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ಧನ್ಯವಾದಗಳನ್ನ ತಿಳಿಸಿದೆ.

ನಮ್ಮ ಮೆಟ್ರೋದ ನೇರಳೆ ಮಾರ್ಗದಲ್ಲಿನ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣದಲ್ಲಿ ಸಂಚರಿಸುತ್ತಿದ್ದ ಒಂದು ರೈಲಿನಲ್ಲಿ ತಾಂತ್ರಿಕ ದೋಷ ಕಂಡುಬಂದ ಹಿನ್ನೆಲೆಯಲ್ಲಿ ಭಾರಿ ಪ್ರಮಾಣದಲ್ಲಿ' ಸಂಚಾರ ವ್ಯತ್ಯಯವುಂಟಾಗಿತ್ತು. ಸಂಜೆ 6:40ರ ಸುಮಾರಿಗೆ ಈ ತಾಂತ್ರಿಕ ದೋಷ ಕಂಡುಬಂದಿದ್ದು, ನಿಲ್ದಾಣದಲ್ಲಿ 30 ನಿಮಿಷಗಳಿಗೂ ಅಧಿಕ ಕಾಲ ಪ್ರಯಾಣಿಕರು ಪರದಾಡುವಂತಾಗಿತ್ತು. ಸಂಚಾರ ವ್ಯತ್ಯಯದಿಂದಾಗಿ ನೂರಾರು ಪ್ರಯಾಣಿಕರು ನಿಲ್ದಾಣದಲ್ಲಿ ಕಿಕ್ಕಿರಿದು ರೈಲಿಗಾಗಿ ಕಾಯುವಂತ ಪರಿಸ್ಥಿತಿ ಬಂದಿತ್ತು.



ಸಾಮಾನ್ಯ ಸೇವೆಯನ್ನು ಶೀಘ್ರದಲ್ಲೇ ಪುನಃಸ್ಥಾಪಿಸಲು ಪ್ರಯತ್ನಿಸುತ್ತಿದ್ದು, ಪ್ರಯಾಣಿಕರು ಸಹಕರಿಸಿ ತಮ್ಮ ಪ್ರಯಾಣವನ್ನು ಯೋಜಿಸಿಕೊಳ್ಳುವಂತೆ ಬಿಎಂಆರ್‌ಸಿಎಲ್ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿಗಳು ಪ್ರಕಟಣೆ ಮೂಲಕ ತಿಳಿಸಿದ್ದರು. ಮಾತುಕೊಟ್ಟಂತೆ ಅಧಿಕಾರಿಗಳು ತ್ವರಿತಗತಿಯಲ್ಲಿ ವ್ಯತ್ಯಯವನ್ನು ಸರಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ.

## ಡೇಟಾ ಸೆಂಟರ್ 2 ದಿನ ತಾತ್ಕಾಲಿಕ ಸ್ಥಗಿತ: ಸಾರ್ವಜನಿಕರು ಸಹಕರಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಮನವಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಡಿಜಿಟಲ್ ಸೇವೆಗಳಿಗೆ ಕೇಂದ್ರಬಿಂದುವಾಗಿರುವ ರಾಜ್ಯ ಡೇಟಾ ಸೆಂಟರ್‌ನಲ್ಲಿ ಮಹತ್ವದ ತಾಂತ್ರಿಕ ನಿರ್ವಹಣೆ ಮೂಲಸೌಕರ್ಯ ನವೀಕರಣ ಹಾಗೂ ಭದ್ರತಾ ಸುಧಾರಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ಎರಡು ದಿನಗಳ ಕಾಲ ಡೇಟಾ ಸೆಂಟರ್ ಸೇವೆಗಳು ತಾತ್ಕಾಲಿಕವಾಗಿ ಸ್ಥಗಿತಗೊಳ್ಳಲಿವೆ ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



ರಾಜ್ಯ ಸರ್ಕಾರದ ಅನೇಕ ಇಲಾಖೆಗಳ ವೆಬ್ ಪೋರ್ಟಲ್‌ಗಳು, ನಾಗರಿಕ ಸೇವಾ ವ್ಯವಸ್ಥೆಗಳು, ವಿವಿಧ ಪ್ರಮಾಣಪತ್ರಗಳಿಗೆ ಸಂಬಂಧಿಸಿದ ಆನ್‌ಲೈನ್ ಸೇವೆಗಳು, ಇಆಫೀಸ್ ವ್ಯವಸ್ಥೆಗಳು, ಇಲಾಖೆಗಳ ಡಿಜಿಟಲ್ ಡೇಟಾಬೇಸ್‌ಗಳು ಸೇರಿದಂತೆ ಹಲವು ತಂತ್ರಜ್ಞಾನ ಆಧಾರಿತ ಸರ್ಕಾರಿ ಸೇವೆಗಳು ಈ ಡಾಟಾ ಸೆಂಟರ್ ಮೂಲಕ ಕಾರ್ಯನಿರ್ವಹಿಸುತ್ತಿವೆ. ಈ ಹಿನ್ನೆಲೆಯಲ್ಲಿ ನಿರ್ವಹಣಾ ಕಾರ್ಯ ನಡೆಯುವ ಅವಧಿಯಲ್ಲಿ ಕೆಲವು ಸೇವೆಗಳ ಲಭ್ಯತೆಯಲ್ಲಿ ತಾತ್ಕಾಲಿಕ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ ಎಂದು ಸಚಿವರು ವಿವರಿಸಿದ್ದಾರೆ.

ರಾಜ್ಯದ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಬಲಿಷ್ಠ, ಸುರಕ್ಷಿತ ಹಾಗೂ ಹೆಚ್ಚಿನ ಸಾಮರ್ಥ್ಯ ತುಂಬಲು ಈ ನಿರ್ವಹಣಾ ಕಾರ್ಯ ಕೈಗೊಳ್ಳಲಾಗುತ್ತಿದೆ. ಭವಿಷ್ಯದಲ್ಲಿ ನಾಗರಿಕರಿಗೆ ಇನ್ನಷ್ಟು ವೇಗವಾಗಿ, ಯಾವುದೇ ತಾಂತ್ರಿಕ ಅಡಚಣೆಗಳಿಲ್ಲದೆ ಮತ್ತು ಸುರಕ್ಷಿತ ರೀತಿಯಲ್ಲಿ ಸರ್ಕಾರಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಈ ಅಪ್‌ಗ್ರೇಡ್ ಅತ್ಯಂತ ಅಗತ್ಯ ಎಂದು ಸಚಿವರು ಹೇಳಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ರಾಜ್ಯದಲ್ಲಿ ಡಿಜಿಟಲ್ ಸೇವೆಗಳ ಬಳಕೆ ಗಣನೀಯವಾಗಿ ಹೆಚ್ಚಾಗಿದೆ. ಇದರಿಂದ ಡೇಟಾ ಸಂಸ್ಕರಣಾ ಸಾಮರ್ಥ್ಯ, ಸೈಬರ್ ಭದ್ರತೆ, ಸರ್ವರ್ ಕಾರ್ಯಕ್ಷಮತೆ ಹಾಗೂ ಸೇವೆಗಳ ಸ್ಥಿರತೆಯನ್ನು ಇನ್ನಷ್ಟು ಸುಧಾರಿಸುವ ಅಗತ್ಯ ಎದುರಾಗಿದೆ. ಇದೇ ಕಾರಣಕ್ಕೆ ತಜ್ಞರ ಸಲಹೆ ಮೇರೆಗೆ ಈ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಈ ಎರಡು ದಿನಗಳ ಅವಧಿಯಲ್ಲಿ ಸಾರ್ವಜನಿಕರು ಸರ್ಕಾರಿ ಆನ್‌ಲೈನ್ ಸೇವೆಗಳನ್ನು ಬಳಸುವಾಗ ಕೆಲವು ತಾತ್ಕಾಲಿಕ ಅಡಚಣೆಗಳನ್ನು ಎದುರಿಸಬೇಕಾಗಬಹುದು, ಸಾರ್ವಜನಿಕರಿಗೆ ಹೆಚ್ಚಿನ ತೊಂದರೆಯಾಗಬಾರದೆಂದು ರಜಾ ದಿನಗಳಲ್ಲಿ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ, ಸಾರ್ವಜನಿಕರು ಪೂರ್ಣ ಸಹಕಾರ ನೀಡಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮನವಿ ಮಾಡಿದ್ದಾರೆ. ಇದು ತಾತ್ಕಾಲಿಕ ಅಸೌಕರ್ಯ ಮಾತ್ರ. ಆದರೆ ಈ ಕಾರ್ಯ ಪೂರ್ಣಗೊಂಡ ನಂತರ ರಾಜ್ಯದ ಇ-ಆಡಳಿತ ವ್ಯವಸ್ಥೆ ಮತ್ತಷ್ಟು ಸುಧಾರಣೆಗೊಳ್ಳಲಿದೆ.

ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ನಿರಂತರವಾಗಿ ತಂತ್ರಜ್ಞಾನ ಹೂಡಿಕೆಯನ್ನು ಮಾಡುತ್ತಿದೆ ಎಂದು ಸಚಿವರು ಹೇಳಿದ್ದಾರೆ.

ಕರ್ನಾಟಕವನ್ನು ದೇಶದಲ್ಲೇ ಅತ್ಯುತ್ತಮ ಡಿಜಿಟಲ್ ಆಡಳಿತ ವ್ಯವಸ್ಥೆ ಹೊಂದಿರುವ ರಾಜ್ಯವನ್ನಾಗಿ ರೂಪಿಸುವ ದೃಷ್ಟಿಯಿಂದ ಸರ್ಕಾರ ಕ್ರಮಬದ್ಧವಾಗಿ ತಂತ್ರಜ್ಞಾನ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುತ್ತಿದೆ.

# ಶೈಕ್ಷಣಿಕ ವರ್ಷ ಆರಂಭಗೊಂಡರೂ ಸಚಿವರಿಲ್ಲದೆ ಸೊರಗುತ್ತಿದೆ ಶಿಕ್ಷಣ ಇಲಾಖೆ

• ಉದಯವಾಹಿನಿ, ಬೆಂಗಳೂರು

ಶೈಕ್ಷಣಿಕ ವರ್ಷ ಆರಂಭಗೊಂಡರೂ ರಾಜ್ಯದಲ್ಲಿ ಶಿಕ್ಷಣ ಸಚಿವರುಗಳಿಲ್ಲದೇ ವ್ಯಾಸಂಗ ಸೊರಗುವಂತಾಗಿದೆ. ರಾಜಕೀಯ ಕಾರಣಗಳಿಗಾಗಿ ಸಚಿವ ಸಂಪುಟ ಪೂರ್ಣ ಪ್ರಮಾಣದಲ್ಲಿ ರಚನೆಯಾಗಿಲ್ಲ. ಅದರಲ್ಲೂ ಪ್ರಮುಖವಾಗಿ ಕೃಷಿ ಮತ್ತು ಶಿಕ್ಷಣ ಇಲಾಖೆಗೆ ಪ್ರತ್ಯೇಕ ಸಚಿವರಿಲ್ಲದೇ, ಈ ಪ್ರಮುಖ ಖಾತೆಗಳು ಮುಖ್ಯಮಂತ್ರಿಯವರ ಬಳಿಯೇ ಉಳಿದಿವೆ. ನೈರುತ್ಯ ಮುಂಗಾರು ಆರಂಭವಾಗಿ ಕೃಷಿ ವರ್ಷ ಶುರುವಾಗಿದೆ. ಜೂನ್‌ನಿಂದ ಶೈಕ್ಷಣಿಕ ವರ್ಷ ಕೂಡ ಆರಂಭಗೊಂಡಿದೆ. ಶಾಲಾ, ಕಾಲೇಜುಗಳಲ್ಲಿ ಪ್ರವೇಶ ಹಾಗೂ ಇತರೆ ಚಟುವಟಿಕೆಗಳು ಬಿರುಸಿನಿಂದ ನಡೆಯುತ್ತಿವೆ. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಮತ್ತು ಕಾಲೇಜು ಶಿಕ್ಷಣಕ್ಕೆ ಪ್ರತ್ಯೇಕವಾದ ಸಚಿವರ ಅಗತ್ಯತೆ ಇತ್ತು. ಶಿಕ್ಷಣದಲ್ಲಿ ಮಹತ್ವದ ಸುಧಾರಣೆ ಮಾಡಲು ಹಿಂದಿನ ಸಿದ್ದರಾಮಯ್ಯ ಸರ್ಕಾರ, ಹಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಂಡಿದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಒಪ್ಪದೇ, ಕರ್ನಾಟಕ ತನ್ನದೇ ಆದ ಶಿಕ್ಷಣ ನೀತಿ ರೂಪಿಸಲು ಮುಂದಾಗಿದೆ. ಅದಕ್ಕಾಗಿ ತಜ್ಞರ ಸಮಿತಿಯನ್ನು ರಚಿಸಿ ವರದಿ ಪಡೆಯುವ ಪ್ರಯತ್ನಗಳಾಗಿದ್ದವು. ಜೊತೆಗೆ ರಾಜ್ಯಾದ್ಯಂತ ಸುಮಾರು 800ಕ್ಕೂ ಹೆಚ್ಚು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲು ಕ್ರಿಯಾ ಯೋಜನೆ ಸಿದ್ಧವಾಗಿದೆ. ಈ ಹಂತದಲ್ಲಿ ಇಲಾಖೆಗೆ ಪ್ರತ್ಯೇಕವಾದ ಸಚಿವರ ಅಗತ್ಯ ಹೆಚ್ಚಿತ್ತು. ಶಾಲಾ, ಕಾಲೇಜುಗಳ ಪ್ರವೇಶದಲ್ಲಿ ಸರ್ಕಾರಿ ಕಾಲೇಜುಗಳಿಗೆ ವಿದ್ಯಾರ್ಥಿಗಳ ಕೊರತೆಯಾದರೆ, ಖಾಸಗಿ ಶಾಲೆಗಳಲ್ಲಿ ಅಧಿಕವಾದ ಶುಲ್ಕ, ಅನಧಿಕೃತವಾದ ಡೊನೇಷನ್ ಹಾವಳಿಯಿಂದ ಪೋಷಕರು ಹೈರಾಣಾಗುತ್ತಿದ್ದಾರೆ. ಸಚಿವರಿಲ್ಲದ ಕಾರಣ ಅಧಿಕಾರಿಗಳು ತಮ ವ್ಯಾಪ್ತಿಯಲ್ಲಷ್ಟೇ ಕೆಲಸ ಮಾಡಲು ಸಾಧ್ಯವಾಗುತ್ತಿದೆ. ಕೆಲವು ವಿಚಾರಗಳಲ್ಲಿ ಜನ ಪ್ರಾತಿನಿಧ್ಯದ ಅಗತ್ಯ ತೀವ್ರವಾಗಿದೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಕೊರತೆ ಎದ್ದು ಕಾಣುತ್ತಿದೆ.





ಶಾಲಾ ಶಿಕ್ಷಣ ವ್ಯಾಪ್ತಿಯಲ್ಲಿ 41 ಸಾವಿರಕ್ಕೂ ಹೆಚ್ಚು ಪ್ರಾಥಮಿಕ ಶಾಲೆಗಳು ಮತ್ತು ಸಾವಿರಾರು ಪ್ರೌಢ ಶಾಲೆಗಳಿವೆ. 1,78,935 ಶಿಕ್ಷಕರ ಹುದ್ದೆಗಳು ಮಂಜೂರಾಗಿವೆ. ರಾಜ್ಯದಲ್ಲಿ 1.33 ಲಕ್ಷ ಶಿಕ್ಷಕರು ಕೆಲಸ ಮಾಡುತ್ತಿದ್ದು, 45,590 ಹುದ್ದೆಗಳು ಖಾಲಿ ಇವೆ. 51 ಸಾವಿರ ಅತಿಥಿ ಶಿಕ್ಷಕರನ್ನು 2026-27ನೇ ಸಾಲಿಗೆ ನೇಮಿಸಿಕೊಳ್ಳಲು ರಾಜ್ಯ ಸರ್ಕಾರ ಅನುಮತಿಸಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳಲ್ಲಿ 79 ಸಾವಿರಕ್ಕೂ ಹೆಚ್ಚು ಉನ್ನತ ಶಿಕ್ಷಣದಲ್ಲಿ13,600 ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಖಾಲಿ ಇವೆ. ರಾಜ್ಯ ಸರ್ಕಾರ 15 ಸಾವಿರ ಶಿಕ್ಷಕರ ನೇಮಕಾತಿಗೆ ಮುಂದಾಗಿದೆ. ಇಂತಹ ಸಂದರ್ಭದಲ್ಲಿ ಶಿಕ್ಷಣ ಸಚಿವರಿಲ್ಲದೇ ಇರುವುದು ಭಾರೀ ಕೊರತೆಯಾಗಿ ಕಾಣಿಸುತ್ತಿದೆ.

ಕೆಪಿಎಸ್ ಶಾಲೆಗಳಿಗೆ ಸಿಎಸ್‌ಆರ್ ನಿಧಿ ಬಳಸಿ ಅಭಿವೃದ್ಧಿ ಪಡಿಸಲು ಸಾಕಷ್ಟು ಚರ್ಚೆಗಳಾಗಿದ್ದವು. ಶಿವಮೊಗ್ಗದಲ್ಲಿ ಅಧಿಕೃತವಾಗಿ ಕಾರ್ಯಕ್ರಮ ಉದ್ಘಾಟನೆಯಾಗಬೇಕಿತ್ತು. ಅಷ್ಟರಲ್ಲಿ ನಾಯಕತ್ವ ಬದಲಾವಣೆಯಾಗಿ ಸರ್ಕಾರವೂ ಬದಲಾಯಿತು. ಮೊದಲ ಹಂತದ ಸಂಪುಟ ವಿಸ್ತರಣೆಯಲ್ಲೇ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧುಬಂಗಾರಪ್ಪ ಮತ್ತು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಂಡು ಖಾತೆ ನಿರ್ವಹಣೆಗೆ ಅವಕಾಶ ಮಾಡಿಕೊಡಬಹುದು ಎಂಬ ಅಂದಾಜುಗಳಿದ್ದವು. ಆದರೆ ಲೋಕೋಪಯೋಗಿ, ಬೃಹತ್ ಕೈಗಾರಿಕೆಯಂತಹ ಖಾತೆಗಳಿಗೆ ಹಿಂದಿನ ಸಚಿವರನ್ನೇ ಮುಂದುವರಿಸಲಾಗಿದೆ. ಶಿಕ್ಷಣ, ಕೃಷಿಯಂತಹ ಖಾತೆಗಳನ್ನು ಕಡೆಗಣಿಸುವುದು ಚರ್ಚೆಗೆ ಗ್ರಾಸವಾಗಿದೆ. ಎರಡನೇ ಹಂತ ಸಂಪುಟ ವಿಸ್ತರಣೆಯಾಗಬಹುದು. ಶಿಕ್ಷಣ ಮತ್ತು ಕೃಷಿಗೆ ಸಚಿವರ ನೇಮಕವಾಗಬಹುದು ಎಂಬ ನಿರೀಕ್ಷೆಗಳು ಇನ್ನೂ ಈಡೇರಿಲ್ಲ. ಹೊಸ ಸರ್ಕಾರ ರಚನೆಯಾಗಿ ತಿಂಗಳು ಸಮೀಪಿಸಲಾರಂಭಿಸಿವೆ. ಸಂಪುಟ ವಿಸ್ತರಣೆಯೂ ನಡೆದಿಲ್ಲ, ಪ್ರಮುಖ ಖಾತೆಗಳಿಗೆ ಸಚಿವರಿಲ್ಲದೇ ಕೆಲಸ ಕಾರ್ಯಗಳು ಕುಂಠಿತವಾಗುತ್ತಿರುವುದು ಕಂಡು ಬರುತ್ತಿದೆ.

**ಮೇಲ್ವಾವಣೆ ಕುಸಿದು ಕೆಲವೆಡೆ ಅವಘಡ**

ಪಠ್ಯಪುಸ್ತಕ, ಶೂ, ಸಾಕ್ಸ್, ಸಮವಸ್ತ್ರ ವಿತರಣೆಯಾಗಬೇಕು. ಬಿಸಿಯೂಟ ಯೋಜನೆ ಕ್ರಮ ಬದ್ಧಗೊಳ್ಳಬೇಕು. ರಾಜ್ಯ ಶಿಕ್ಷಣ ನೀತಿಯ ಪ್ರಕಾರ ಪಠ್ಯಕ್ರಮ ಬದಲಾಗಬೇಕು. ಸರ್ಕಾರಿ ಶಾಲೆಗಳಲ್ಲಿ ಮೇಲ್ಚಾವಣಿ ಕುಸಿದು ಕೆಲವೆಡೆ ಅವಘಡಗಳಾಗಿವೆ. ಶಾಲೆಗಳಿಗೆ ಕಟ್ಟಡ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲ ಸೌಲಭ್ಯಗಳ ಕೊರತೆ ಗಂಭೀರವಾಗಿದೆ. ಅವುಗಳತ್ತ ಗಮನ ಹರಿಸಬೇಕಿತ್ತು. ಈ ಹಿಂದೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾಗಿದ್ದ ಮಧು ಬಂಗಾರಪ್ಪ ಅವರು ಮೂರು ಹಂತದ ಪರೀಕ್ಷೆ ವ್ಯವಸ್ಥೆಗಳನ್ನು ಜಾರಿಗೆ ತಂದು ರಾಷ್ಟ್ರ ಮಟ್ಟದಲ್ಲಿ ಮಾದರಿ ಎನಿಸಿಕೊಂಡಿದ್ದರು.

**ಈ ದಿನದ ದರ** ಪೆಟ್ರೋಲ್: 110.93 ₹/L | ಡೀಸೆಲ್ : 98.80₹/L | ಬಂಗಾರ: ₹ 14, 433/Gram 24ct ₹13,230/Gram 22ct | ಬೆಳ್ಳಿ: ₹245.00/Gram

# ಕಿಮ್ಸ್ ರೆನೋವಾ ಆಂಕಾಲಜಿ ಇನ್‌ಸ್ಟಿಟ್ಯೂಟ್ ಉದ್ಘಾಟನೆ ಮಾಡಿದ ಕ್ರಿಕೆಟ್ ದಿಗ್ಗಜ ವಿವಿಎಸ್ ಲಕ್ಷ್ಮಣ್

• ಉದಯವಾಹಿನಿ, ಬೆಂಗಳೂರು

ಮಹದೇವಪುರದಲ್ಲಿರುವ ಕಿಮ್ಸ್ ಆಸ್ಪತ್ರೆಯಲ್ಲಿ (ಕೃಷ್ಣ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್) ಅತ್ಯಾಧುನಿಕ ಹಾಗೂ ಸಮಗ್ರ ಕ್ಯಾನ್ಸರ್ ಆರೈಕೆ ಕೇಂದ್ರವಾದ 'ಕಿಮ್ಸ್ ರೆನೋವಾ ಆಂಕಾಲಜಿ ಇನ್‌ಸ್ಟಿಟ್ಯೂಟ್' ಅನ್ನು ಅಧಿಕೃತವಾಗಿ ಮಾಜಿ ಅಂತರರಾಷ್ಟ್ರ ಕ್ರಿಕೆಟಿಗ ಹಾಗೂ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ (ಎನ್‌ಸಿಎ) ಮುಖ್ಯಸ್ಥ ಶ್ರೀ ವಿವಿಎಸ್ ಲಕ್ಷ್ಮಣ್ ಉದ್ಘಾಟಿಸಲಾಯಿತು. ನಂತರ ಮಾತನಾಡಿದ ಅವರು, ಸಿಲಿಕಾನ್ ಸಿಟಿಯಲ್ಲಿ ಕ್ಯಾನ್ಸರ್ ಚಿಕಿತ್ಸಾ ರಂಗವನ್ನು ಮತ್ತಷ್ಟು ಬಲಪಡಿಸುವಲ್ಲಿ ಪ್ರಮುಖ ಮೈಲಿಗಲ್ಲಾಗಿ ಹೊರಹೊಮ್ಮಿದೆ. ಉದ್ಘಾಟನಾ ಸಮಾರಂಭದಲ್ಲಿ ಆರೋಗ್ಯ ರಂಗದ ಪ್ರಮುಖ ನಾಯಕರು, ಹೆಸರಾಂತ ಆಂಕಾಲಜಿ ತಜ್ಞರು, ಗಣ್ಯರು ಮತ್ತು ಕ್ಯಾನ್ಸರ್‌ನಿಂದ ಗುಣಮುಖರಾದ ರೋಗಿಗಳು ಭಾಗವಹಿಸಿದ್ದರು. ಕ್ರಿಕೆಟ್ ಗೂ ಆಂಕೊಲಜಿಗೂ


ಉದಯವಾಹಿನಿ ಚಿತ್ರ


ಅವಿನಾಭಾವ ಸಂಬಂಧವಿದೆಕ್ರಿಕೆಟ್ ಕ್ಯಾನ್ಸರ್ ರೋಗದ ವಿಭಾಗಗಳಿಗೂ ಸಾಕಷ್ಟು ಸಂಬಂಧ ಇದೆ ಸಮಾಜದ ಹಿಂದುಳಿದ ವರ್ಗಗಳಲ್ಲಿ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವ ನಿಟ್ಟಿನಲ್ಲಿ ಕಿಮ್ಸ್ ರೆನೋವಾ ಆಂಕಾಲಜಿ ಇನ್‌ಸ್ಟಿಟ್ಯೂಟ್ ಮತ್ತು ಸಮರೋಹಣ ಕ್ಯಾನ್ಸರ್ ಫೌಂಡೇಶನ್ ಜಂಟಿಯಾಗಿ ''134 ಉಚಿತ ಸ್ಕ್ರೀನಿಂಗ್ ಕ್ಯಾಂಪ್'' ಆಯೋಜಿಸುವ ಪ್ರತಿಜ್ಞೆ ಕೈಗೊಳ್ಳಲಾಯಿತು. ಭಾರತದ ಪರವಾಗಿ 134 ಟೆಸ್ಟ್ ಪಂದ್ಯಗಳನ್ನು ಆಡಿರುವ ವಿವಿಎಸ್ ಲಕ್ಷ್ಮಣ್ ಅವರ ಐತಿಹಾಸಿಕ ಕ್ರೀಡಾ ಸಾಧನೆಯ ಪ್ರೇರಣೆಯೊಂದಿಗೆ ಈ 134 ಉಚಿತ ಜಾಗೃತಿ ಮತ್ತು ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದೇ ವೇಳ ಸಂವಾದದಲ್ಲಿ ಕ್ರಿಕೆಟಾಗುವ ಅಂಕಾಲಜಿಗಳಿಗೆ ಸಂಬಂಧಿಸಿದಂತೆ ಸಾಕಷ್ಟು ಪ್ರಶ್ನಾವಳಿಗಳು ಚರ್ಚೆಗಳು ಸಂವಾದದಲ್ಲಿ ನಡೆದವು. ಕಿಮ್ಸ್ ಆಸ್ಪತ್ರೆಯ ಪ್ರಮುಖ ತಜ್ಞರಾದ ಆಂಕಾಲಜಿ ವಿಭಾಗದ ಅಧ್ಯಕ್ಷರಾಗಿರುವ ಡಾ. ಸಂದೀಪ್ ನಾಯಕ್ ಮಾತನಾಡಿ, ಅತ್ಯಾಧುನಿಕ ತಂತ್ರಜ್ಞಾನ ಮತ್ತು ಹೆಸರಾಂತ ವೈದ್ಯಕೀಯ ತಜ್ಞರನ್ನು ಒಟ್ಟುಗೂಡಿಸುವ ಮೂಲಕ ನಾವು ಕ್ಯಾನ್ಸರ್ ಆರೈಕೆಯಲ್ಲಿ ಹೊಸ ಮಾನದಂಡವನ್ನು ಸ್ಥಾಪಿಸುತ್ತಿದ್ದೇವೆ,ಇಂದಿನ ಕ್ಯಾನ್ಸರ್ ಚಿಕಿತ್ಸೆಗೆ ನಿಖರತೆ ಮತ್ತು ಬಹುಶಿಸ್ತೀಯ ಪರಿಣತಿಯ ಅಗತ್ಯವಿದೆ. ರೊಬೊಟಿಕ್ ಸರ್ಜರಿ, ಸುಧಾರಿತ ಶಸ್ತ್ರಚಿಕಿತ್ಸೆ ಸೇರಿದಂತೆ ರೋಗಿಗಳಿಗೆ ವೈಯಕ್ತೀಕರಿಸಿದ ಚಿಕಿತ್ಸಾ ಮಾರ್ಗಗಳನ್ನು ನಾವು ಒದಗಿಸುತ್ತೇವೆ ಎಂದು ಹೇಳಿದರು.ಪ್ರತಿಯೊಬ್ಬರಿಗೂ ವಿಶ್ವದರ್ಜೆಯ ಸುಧಾರಿತ ಆರೋಗ್ಯ ಸೇವೆಯನ್ನು ಲಭ್ಯವಾಗುವಂತೆ ಮಾಡುವುದು ನಮ್ಮ ಮುಖ್ಯ ಆಶಯವಾಗಿದೆ. ಮಹದೇವಪುರದಲ್ಲಿ ಆಸ್ಪತ್ರೆ ನಿರ್ಮಾಣ ಮಾಡಲು ಸುತ್ತಮುತ್ತಲಿನ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅತ್ಯಾಧುನಿಕವಾದಂತಹ ತಂತ್ರಜ್ಞಾನವನ್ನು ಬಳಸಿಕೊಂಡು ಅಂಕಾಲಜಿ ಕೇಂದ್ರವನ್ನು ನಿರ್ಮಾಣ ಮಾಡಲಾಗಿದೆ ಇದರ ಸದುಪಯೋಗವನ್ನು ರೋಗಿಗಳು ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು ಅತ್ಯಧುನಿಕವಾದಂತಹ ತಂತ್ರಜ್ಞಾನ ಒಳಗೊಂಡಿದ್ದು, ಒಂದೇ ಸೂರಿನಡಿ ಎಲ್ಲಾ ಚಿಕಿತ್ಸಾ ಸೌಲಭ್ಯಗಳು ಆಸ್ಪತ್ರೆಯಲ್ಲಿ ವದಯಿಸಲಾಗಿದೆ.

## ಸಚಿವ ಸ್ಥಾನಕ್ಕೆ ಶಾಸಕರ ಲಾಬಿ: ಹೈಕಮಾಂಡ್‌ನಿಂದ ಬಂತು ಫೋನ್, ಡಿಕೆಶಿಗೆ ಖಡಕ್ ಎಚ್ಚರಿಕೆ

• ಉದಯವಾಹಿನಿ,ಬೆಂಗಳೂರು

ಡಿಕೆ ಶಿವಕುಮಾರ್ ನೇತೃತ್ವದ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆಗಳು ಜೋರಾಗಿದ್ದು, ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಇದೇ ಜೂನ್ 27ರಂದು ದೆಹಲಿಗೆ ಭೇಟಿ ನೀಡಿ ಪಕ್ಷದ ಹೈಕಮಾಂಡ್ನಾಯಕರೊಂದಿಗೆ ಚರ್ಚೆ ನಡೆಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಆದ್ರೆ, ಇದೇ ಸಂಪುಟ ವಿಸ್ತರಣೆ ವಿಚಾರಕ್ಕೆ ಹೈಕಮಾಂಡ್ ಜತೆ ಚರ್ಚಿಸುವ ಮುನ್ನವೇ ದೆಹಲಿಯಿಂದ ಡಿಕೆ ಶಿವಕುಮಾರ್‌ಗೆ ಮಹತ್ವದ ಸೂಚನೆ ಬಂದಿದೆ. ಹೌದು ಸಚಿವ ಸ್ಥಾನಕ್ಕಾಗಿ ಲಾಬಿಗೆ ಅವಕಾಶ ಕೊಡಬೇಡಿ ಎಂದ ಡಿಕೆ ಶಿವಕುಮಾರ್ ಅವರಗೆ ಹೈಕಮಾಂಡ್ ದೂರವಾಣಿ ಕರೆ ಮಾಡಿ ಸೂಚಿಸಿದೆ. ಸಚಿವ ಸ್ಥಾನ ನೀಡಬೇಕೆಂದು ಹಲವು ಶಾಸಕರು, ವಿಧಾನಪರಿಷತ್ ಸದಸ್ಯರು ಪಟ್ಟು ಹಿಡಿದಿದ್ದು, ಈ ಸಂಬಂಧ ದೆಹಲಿಗೆ ತೆರಳಿ ಭಾರೀ ಲಾಬಿ ನಡೆಸಿದ್ದಾರೆ. ಇನ್ನೊಂದೆಡೆ ತಮ್ಮ ಶಾಸಕರನ್ನು ಮಂತ್ರಿ ಮಾಡಬೇಕೆಂದು ಕ್ಷೇತ್ರಗಳಲ್ಲಿ ಪ್ರತಿಭಟನೆಗಳು ಸಹ ನಡೆದಿವೆ.

## ಬೆಳೆ ವಿಮೆ: ಭತ್ತ, ಮುಸುಕಿನ ಜೋಳ, ಈರುಳ್ಳಿ, ಎಳ್ಳುನೋಂದಣಿಗೆ ಅವಕಾಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಮುಂಗಾರು ಹಂಗಾಮಿನ ಬೆಳೆ ವಿಮೆ ಪ್ರಕ್ರಿಯೆ ಚುರುಕುಗೊಂಡಿದ್ದು, ವಿವಿಧ ಬೆಳೆಗಳಿಗೆ ವಿಮೆ ಮಾಡಿಸಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ. ಕೇಂದ್ರ ಸರ್ಕಾರದ ಸೂಚನೆ ಮೇರೆಗೆ ರಾಜ್ಯದಲ್ಲಿ ಕೃಷಿ ಇಲಾಖೆಯು ವಿಮೆ ನೋಂದಣಿ, ನಿಗದಿತ ಬೆಳೆಗಳು.ತುಂಬಬೇಕಾದ ಮೊತ್ತ ಹಾಗೂ ಕೊನೆಯ ದಿನಾಂಕವನ್ನು ಪ್ರಕಟಿಸಿವೆ.

ಬಳ್ಳಾರಿ ಜಿಲ್ಲೆಯ ರೈತರ ಆರ್ಥಿಕ ಭದ್ರತೆಗಾಗಿ 2026-27ನೇ ಸಾಲಿನ 'ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ' ಯೋಜನೆಯಡಿ ಮುಂಗಾರು ಹಂಗಾಮಿನ ಬೆಳೆ ವಿಮೆ ನೋಂದಣಿ ಪ್ರಕ್ರಿಯೆ ಶುರು ಮಾಡಲಾಗಿದೆ.

ಬೆಳೆ ಸಾಲ ಪಡೆದ ಹಾಗೂ ಪಡೆಯದ ಉಭಯ ರೈತರು ತಮ್ಮ ಬೆಳೆಗಳಿಗೆ ಬ್ಯಾಂಕುಗಳ ಮೂಲಕ ವಿಮೆ ಮಾಡಿಸಬಹುದಾಗಿದೆ. ಯೋಜನೆಯಡಿ ಜಿಲ್ಲೆಯ ಗ್ರಾಮ ಪಂಚಾಯಿತಿ ಮತ್ತು ಹೋಬಳಿ ಮಟ್ಟದ ವಿವಿಧ ಪ್ರಮುಖ ಬೆಳೆಗಳಿಗೆ ವಿಮೆ ಮಾಡಿಸಲು ಕೊನೆಯ ದಿನಾಂಕಗಳನ್ನು ನಿಗದಿಪಡಿಸಲಾಗಿದೆ. ರೈತರು ತಮ್ಮ ವ್ಯಾಪ್ತಿಯ ಯಾವುದೇ ಸ್ಥಳೀಯ ಬ್ಯಾಂಕ್‌ಗಳು, ಸಾರ್ವಜನಿಕ ಸೇವಾ ಕೇಂದ್ರಗಳು ಅಥವಾ ಗ್ರಾಮ ಪಂಚಾಯತಿ ಮಟ್ಟದಲ್ಲಿ ಹೊಸದಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್ ಸೇವಾ ಕೇಂದ್ರಗಳನ್ನು ಸಂಪರ್ಕಿಸಿ ವಿಮೆಗೆ ನೋಂದಾಯಿಸಿಕೊಳ್ಳಬಹುದು. ಬೆಳೆ ಸಾಲ ಪಡೆದ ರೈತರು ವಿಮೆ ಯೋಜನೆಯಲ್ಲಿ ಭಾಗವಹಿಸಲು ಇಚ್ಛಿಸದಿದ್ದಲ್ಲಿ, ಬೆಳೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ ಕನಿಷ್ಠ 7 ದಿನಗಳ ಮುಂಚಿತವಾಗಿ ತಮ್ಮ ವ್ಯಾಪ್ತಿಯ ಬ್ಯಾಂಕ್ ವ್ಯವಸ್ಥಾಪಕರಿಗೆ ಲಿಖಿತವಾಗಿ ಮುಚ್ಚಳಿಕೆ ಪತ್ರ ನೀಡಬೇಕಾಗುತ್ತದೆ. ಇಲ್ಲದಿದ್ದರೆ ಸ್ವಯಂಚಾಲಿತವಾಗಿ ವಿಮೆ ಕಂತು ಕಡಿತವಾಗಲಿದೆ.

# ಕರ್ನಾಟಕದ 826 ಹಳ್ಳಿಗಳಲ್ಲಿ ನೀರಿನ ಸಮಸ್ಯೆ

### ಸಮಸ್ಯೆ ಹಿನ್ನೆಲೆಯಲ್ಲಿ ಅಧಿಕಾರಿಗಳ ಸಭೆ ನಡೆಸಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ

• ಉದಯವಾಹಿನಿ,ಬೆಂಗಳೂರು

ಕರ್ನಾಟಕದಲ್ಲಿ ಜೂನ್ ನಾಲ್ಕನೇ ವಾರದ ಹೊತ್ತಿಗೆ ಶೇ 42ರಷ್ಟು ಮಳೆ ಕೊರತೆ ಎದುರಾಗಿದ್ದು, 826 ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಿದೆ. 11

ಎಲ್ ನಿ ನೋ ಪ್ರಭಾವದಿಂದಾಗಿ ರಾಜ್ಯದಲ್ಲಿ ಈ ವರ್ಷ ಜೂನ್ ತಿಂಗಳವರೆಗೆ ಮಳೆ ಕೊರತೆಯಿಂದ ಅಂತರ್ಜಲ ಮಟ್ಟವೂ ಕುಸಿದಿದೆ. ಕಳೆದ ಬೇಸಿಗೆಯಲ್ಲಿ 1000 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇತ್ತು. ಅಲ್ಲಿ ಹೊಸ ಕೊಳವೆ ಬಾವಿ ಕೊರೆದು ನೀರು ಪೂರೈಸಲಾಗುತ್ತಿತ್ತು. ಈ ಬಾರಿಯೂ ಸಮಸ್ಯೆ ಎದುರಾಗಿದ್ದು, ನೀರು ವಿತರಣೆಗೆ ಕ್ರಮ ವಹಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ, ತಿಳಿಸಿದ್ದಾರೆ. ಬುಧವಾರ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಕೊರತೆ ಇರುವ ಗ್ರಾಮಗಳಿಗೆ ನೀರು ಪೂರೈಕೆಗೆ ಯಾವುದೇ ಹಣಕಾಸಿನ ಸಮಸ್ಯೆ ಇಲ್ಲ. ರಾಜ್ಯ ಸರ್ಕಾರ ಈಗಾಗಲೇ 1017 ಕೋಟಿ ಹಣವನ್ನು ಮುಂಗಡ ಬಿಡುಗಡೆ ಮಾಡಿದೆ ಎಂದು ತಿಳಿಸಿದರು. ಗ್ರಾಮಠಾಣಾ ವ್ಯಾಪ್ತಿಯಲ್ಲಿ ದಾಖಲೆ ಇಲ್ಲದ ಹಳೆಯ ಮನೆಗಳಿಗೆ ಇ- ಸ್ವತ್ತು ನೀಡುವ

> ದಾಖಲೆ ಇಲ್ಲದೆ ಕೆಲವು ಪಿಡಿಓಗಳು ಇ-ಸ್ವತ್ತು ನೀಡುತ್ತಿರುವ ಬಗ್ಗೆ ಸಾಕ್ಷಿ ಸಹಿತ ದೂರು ಬಂದರೆ, ಅಂತಹ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು.
> ಈಶ್ವರ ಖಂಡ್ರೆ, ಗ್ರಾ. ಮತ್ತು ಪಂ. ರಾಜ್ ಸಚಿವ

ಸಂಬಂಧ ನಿಯಮಗಳಿಗೆ ತಿದ್ದುಪಡಿ ಮಾಡಲು ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಸುಮಾರು 65 ಲಕ್ಷ ಆಸ್ತಿಗಳು ಗ್ರಾಮಠಾಣಾ ವ್ಯಾಪ್ತಿಯಲ್ಲಿ ಬರುತ್ತವೆ. ಇದು ಅವರಿಗೆ ಪೂರ್ವಜರಿಂದ ಬಂದ ಬಳುವಳಿಯಾಗಿದ್ದು, ಕೆಲವರ ಬಳಿ ತಮ್ಮ ಸ್ವತ್ತಿಗೆ ಸಂಬಂಧಿಸಿ ಯಾವುದೇ ದಾಖಲೆ ಇಲ್ಲ.

ಹೀಗಾಗಿ ಒಂದು ಬಾರಿಯ ಕ್ರಮವಾಗಿ ನಿಯಮಾವಳಿ ಸರಳೀಕರಣ ಮಾಡಿ, ಸಾರ್ವಜನಿಕರ ಆಕ್ಷೇಪಣೆ ಕರೆದು 100 ದಿನಗಳ ಒಳಗೆ ಗ್ರಾಮಠಾಣಾ ಆಸ್ತಿಗಳಿಗೆ ಸಮರೋಪಾದಿಯಲ್ಲಿ ಇ-ಖಾತಾ ವಿತರಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಜನರಿಗೆ ಮೂಲ ನಿವಾಸಿಗಳಿಗೆ ಆಸ್ತಿಯ ಹಕ್ಕು ನೀಡಬೇಕು ಎಂಬುದು ಮುಖ್ಯಮಂತ್ರಿಗಳ ಮಹತ್ವಾಕಾಂಕ್ಷೆಯ ಕಾರ್ಯಕ್ರಮವಾಗಿದ್ದು, ಗ್ರಾಮೀಣ ಜನರಿಗೆ ತೊಂದರೆ ಆಗದ ರೀತಿಯಲ್ಲಿ ಮತ್ತು ಸರ್ಕಾರದ ಆಸ್ತಿ (ಖರಾಬು, ಗೋಮಾಳ ಇತ್ಯಾದಿ )ಗಳನ್ನು ಸಂರಕ್ಷಿಸಿಕೊಂಡು, ಸ್ವಾಧೀನದಲ್ಲಿರುವವರಿಗೆ ಖಾತಾ ನೀಡಲು ಕ್ರಮ ವಹಿಸಲಾಗುವುದು ಎಂದು ಖಂಡ್ರೆ ತಿಳಿಸಿದರು.


ಉದಯವಾಹಿನಿ ಚಿತ್ರ

### ಹೊಸದಾಗಿ 11 ಬಿ ಅರ್ಜಿ ಸಲ್ಲಿಸಲು ಕಾಲಾವಕಾಶ ವಿಸ್ತರಣೆ

ನಮೂನೆ 11 ಬಿಯಲ್ಲಿ ಆಸ್ತಿಗಳಿಗೆ ಅರ್ಜಿ ಸಲ್ಲಿಸಲು, ಮುಂದಿನ ಸೆಪ್ಟೆಂಬರ್ ವರೆಗೆ ಕಾಲಾವಕಾಶ ವಿಸ್ತರಿಸುವ ಬಗ್ಗೆ ಸಭೆಯಲ್ಲಿ ನಿರ್ಧರಿಸಲಾಗಿದ್ದು, ಗ್ರಾಮೀಣರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು. ಈವರೆಗೆ 10.16 ಲಕ್ಷ ಆಸ್ತಿಗಳಿಗೆ ಬಿ ಖಾತಾ ನೀಡಲಾಗಿದೆ. ಇನ್ನೂ 90 ಲಕ್ಷ ಆಸ್ತಿಗಳಿಗೆ ಎ ಮತ್ತು ಬಿ ಖಾತಾ ನೀಡಬೇಕಾಗಿದೆ ಎಂದರು. ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಯಾವುದೇ ವಸತಿ ಬಡಾವಣೆಯಲ್ಲಿ ಸರ್ಕಾರಿ ಎ ಮತ್ತು ಬಿ ಖರಾಬು ಜಮೀನೂ ಬಳಸಿಕೊಂಡು ಲೇಔಟ್ ನಿರ್ಮಾಣ ಮಾಡಿದ್ದರೆ, ಅಂತಹ ಆಸ್ತಿಗಳಿಗೆ ಇ-ಸ್ವತ್ತು ನೀಡದಂತೆ ಸೂಚಿಸಲಾಗಿದೆ. ಇಂತಹ ಸ್ವತ್ತುಗಳನ್ನು ದಿಶಾಂಕ್ ಆಪ್ ನಲ್ಲಿ ಖರಾಬು ಇದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಬೇಕಾಗುತ್ತದೆ. ಹೀಗಾಗಿ ಕಂದಾಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅಧಿಕಾರಿಗಳ ಸಭೆ ಕರೆದು ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

### ವಿಳಂಬವಾಗಿದ್ದರೆ ಪಿಡಿಓಗಳಿಗೆ ನೋಟಿಸ್




ಇ-ಸ್ವತ್ತಿಗೆ ಅರ್ಜಿ ಸಲ್ಲಿಸಿ 15 ದಿನಕ್ಕಿಂತ ಹೆಚ್ಚು ವಿಳಂಬವಾಗಿದ್ದರೆ, ತಾಂತ್ರಿಕ ದೋಷ ಹೊರತುಪಡಿಸಿ, ಉದ್ದೇಶಪೂರ್ವಕ ವಿಳಂಬ ಮಾಡುವ ಪಿಡಿಓಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಸೂಚಿಸಿದರು. ಬಿ ಖಾತೆಗಳನ್ನು ಎ ಖಾತೆಯಾಗಿ ಪರಿವರ್ತಿಸಲು ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಈಶ್ವರ ಖಂಡ್ರೆ, ತಿಳಿಸಿದರು.

## ಜುಲೈ 1ರಿಂದಲೇ ಉದ್ಯೋಗ ಖಾತ್ರಿ ಕರ್ನಾಟಕದಲ್ಲಿ ಜಾರಿ, ಹೇಗಿರಲಿದೆ ಹೊಸ ಯೋಜನೆ

• ಉದಯವಾಹಿನಿ, ಬೆಂಗಳೂರು

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ, ಯೋಜನೆ (ಎಂ ನರೇಗಾ) ಯೋಜನೆಯನ್ನು ವಿಕಸಿತ ಭಾರತ - ಗ್ಯಾರಂಟಿ ಫಾರ್ ರೋಜ್ ಗಾರ್ ಅಂಡ್ ಅಜೀವಿಕಾ ಮಿಷನ್ ( ವಿಬಿ ಜಿ ರಾಮ್ ಜಿ) ಆಗಿ ಕೇಂದ್ರ ಸರ್ಕಾರ ಬದಲಾಯಿಸಿದ್ದು, ಕರ್ನಾಟಕದಲ್ಲಿ ಹೊಸ ಯೋಜನೆ ಹೆಸರಲ್ಲೇ ಜಾರಿಗೊಳ್ಳಲಿದೆ. ಯೋಜನೆ ಜಾರಿ ವಿಚಾರವಾಗಿ ಕರ್ನಾಟಕ ಸರ್ಕಾರ ಬಲವಾಗಿ ವಿರೋಧ ವ್ಯಕ್ತಪಡಿಸಿ ಉದ್ಯೋಗ ಖಾತ್ರಿ ಹೆಸರು ಬದಲಾವಣೆ ಮಾಡುವುದು ಬೇಡ, ಜತೆಗೆ ಈ ಹಿಂದೆ ನೀಡುತ್ತಿದ್ದ ರೀತಿಯಲ್ಲಿಯೇ ಕೇಂದ್ರ ಸರ್ಕಾರ ತನ್ನ ಪಾಲಿನ ಶೇ 90ರ ಅನುದಾನ ನೀಡಬೇಕು ಎಂದು ಒತ್ತಾಯಿಸಿತ್ತು. ಈ ಕುರಿತು ಭಾರೀ ಪ್ರತಿಭಟನೆಯೂ ವ್ಯಕ್ತವಾಗಿತ್ತು. ಇದರಿಂದ ಯೋಜನೆ ಯಾವ ಹೆಸರಿನಲ್ಲಿ ಜಾರಿಯಾಗಬಹುದು ಎನ್ನುವ ಗೊಂದಲ ಮುಂದುವರಿದಿತ್ತು.

ಯೋಜನೆ ಕುರಿತಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರು ಬುಧವಾರ ಇಲಾಖೆ ಹಿರಿಯ ಅಧಿಕಾರಿಗಳ ಸಭೆ ನಡೆಸಿದರು. ಗ್ರಾಮೀಣ ಭಾಗದ ಕುಟುಂಬಗಳಿಗೆ ಉದ್ಯೋಗದ ಖಾತ್ರಿ ನೀಡಿದ್ದ ನರೇಗಾ ಹೊಸ ಸ್ವರೂಪ ವಿಕಸಿತ ಭಾರತ್ ಜಿ ರಾಮ್ ಜಿಯಿಂದ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಹೊರೆಯಾದರೂ ಗ್ರಾಮೀಣ ಜನರ, ಮಹಿಳೆಯರ, ವಂಚಿತರ, ದುರ್ಬಲರ ಹಿತದೃಷ್ಟಿಯಿಂದ ಜುಲೈ 1ರಿಂದಲೇ ಜಾರಿಗೆ ತರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸುದ್ದಿಗಾರರಿಗೆ ತಿಳಿಸಿದರು. ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೇಂದ್ರ ಸರ್ಕಾರ 90:10 ಅನುಪಾತದಲ್ಲಿ ವೇತನ ಭರಿಸುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಹಣ ನೀಡುತ್ತಿತ್ತು.

ಆದರೆ, ಈಗ 60:40ರ ಅನುಪಾತದಲ್ಲಿ ವೆಚ್ಚ ಭರಿಸಬೇಕಾಗಿದ್ದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಆಗುತ್ತದೆ ಎಂದು ಹೇಳಿದರು. 2006 ರಿಂದ 2026ರಲ್ಲಿ ಇಲ್ಲಿಯವರೆಗೆ ಕೇಂದ್ರ ಸರ್ಕಾರ ನರೇಗಾ ಅಡಿಯಲ್ಲಿ 56492 ಕೋಟಿ ಭರಿಸಿದ್ದರೆ. ರಾಜ್ಯ ಸರ್ಕಾರ 4821 ಕೋಟಿ ಮಾತ್ರ ಭರಿಸಿ ಸುಮಾರು 182 ಕೋಟಿ ಮಾನವ ದಿನಗಳ ಉದ್ಯೋಗ ಒದಗಿಸಿತ್ತು. ಆದರೆ ಈಗ ಒಂದೇ ವರ್ಷಕ್ಕೆ 3806ಕೋಟಿ ವೆಚ್ಚ ಭರಿಸುವ ಸ್ಥಿತಿ ಬಂದಿದೆ. ಇದು ರಾಜ್ಯದ ಮೇಲೆ ಆಗುವ ದೊಡ್ಡ ಹೊರೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಅಡಿ ರಾಜ್ಯಕ್ಕೆ ಈ ವರ್ಷಕ್ಕೆ 5709 ಕೋಟಿ ಹಂಚಿಕೆ ಮಾಡಿದೆ. ಗ್ರಾಮೀಣ ಜನರಿಗೆ ತೊಂದರೆ ಆಗದಂತೆ ಯೋಜನೆಗೆ ಹೆಚ್ಚುವರಿ ಭರಿಸುವ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು. ಅವರು ಸಮ್ಮತಿಸಿದ್ದಾರೆ ಎಂದರು. ಕೇಂದ್ರ ಸರ್ಕಾರ ಅವೈಜ್ಞಾನಿಕವಾಗಿ ಬೇಸಾಯದ ಸಮಯದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡದಿರುವಂತೆ ಸೂಚಿಸಿದೆ. ಇದು ಗ್ರಾಮೀಣ ಕುಟುಂಬಗಳಿಗೆ ಮಾರಕವಾಗಿದೆ. ಕಾರಣ ಈಗ ಅತ್ಯಾಧುನಿಕ ಕೃಷಿ ಯಂತ್ರೋಪಕರಣ ಬಂದಿದ್ದು, ಗ್ರಾಮೀಣ ಕುಟುಂಬಗಳಿಗೆ ಬೇಸಾಯದ ಸಮಯದಲ್ಲೂ ಕೃಷಿ ಉದ್ಯೋಗ ಲಭಿಸುವುದಿಲ್ಲ.

ಹೀಗಾಗಿ ವಿಬಿಜಿ ರಾಮ್ ಜಿ ಅವರ ಅನ್ನವನ್ನು ಕಸಿಸಿಕೊಂಡಂತೆ ಮಾಡಿದೆ.

## ಬೆಂಗಳೂರಿನಲ್ಲಿ ಜಾಗತಿಕ ಮಟ್ಟದ ಪ್ರತಿಭೆಗಳಿದ್ದರೂ ಆಡಳಿತ ಕಳಪೆ: ತೇಜಸ್ವಿ ಸೂರ್ಯ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಗರದಲ್ಲಿ ಜಾಗತಿಕ ಮಟ್ಟದ ತಂತ್ರಜ್ಞಾನ ಪ್ರತಿಭೆಗಳಿವೆ, ಆದರೆ ಇಲ್ಲಿನ ಆಡಳಿತ ಮಾತ್ರ ತೀರಾ ಕಳಪೆಯಾಗಿದೆ' ಎಂದು ಸಂಸದ ತೇಜಸ್ವಿ ಸೂರ್ಯ ವಾಗ್ದಾಳಿ ನಡೆಸಿದ್ದಾರೆ. ಕಬ್ಬನ್ ಪಾರ್ಕ್ ನಿಲ್ದಾಣದ ಹತ್ತಿರ ಸಂಜೆ 6 ಗಂಟೆಗೆ ನಮ್ಮ ಮೆಟ್ರೋ ರೈಲಿನಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿತ್ತು. ಇಂದಿರಾನಗರದಿಂದ ಮೆಜೆಸ್ಟಿಕ್‌ವರೆಗೆ ದಿಢೀರನೆ ಮೆಟ್ರೋ ಸಂಚಾರ ಸ್ಥಗಿತಗೊಂಡಿತು. ಇದರಿಂದಾಗಿ ಸಾವಿರಾರು ಪ್ರಯಾಣಿಕರು ಪರದಾಡಿದ್ದರು.


ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಂಚಿಕೊಂಡಿರುವ ತೇಜಸ್ವಿ ಸೂರ್ಯ, 'ಬೆಂಗಳೂರಿನಲ್ಲಿ ಜಾಗತಿಕ ಮಟ್ಟದ ಪ್ರತಿಭೆಗಳಿದ್ದಾರೆ. ಆದರೆ ಇಲ್ಲಿನ ಆಡಳಿತ ಮಾತ್ರ ತೀರಾ ಕಳಪೆಯಾಗಿದೆ.

ಇದೇ ಭಾರತದ ಸಿಲಿಕಾನ್ ವ್ಯಾಲಿ ಕಥೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಮೆಟ್ರೋ ರೈಲುಗಳು ಪದೇ ಪದೇ ಕೈಕೊಡುತ್ತಿರುವುದು ಪ್ರಯಾಣಿಕರ ಆತಂಕಕ್ಕೆ ಕಾರಣವಾಗಿದೆ. ಮೆಟ್ರೋ ಸಂಚಾರ ಸ್ಥಗಿತಗೊಂಡರೆ ಇಡೀ ನಗರ ಅವ್ಯವಸ್ಥೆಗೆ ಸಿಲುಕುತ್ತದೆ. ಈ ವೇಳೆ ಆಟೋ, ಕ್ಯಾಬ್‌ಗಳು ಸಿಗುವುದಿಲ್ಲ. ಈ ಸಮಸ್ಯೆಗೆ ಸರ್ಕಾರ ಯಾವುದೇ ಪರ್ಯಾಯ ಸಾರಿಗೆ ವ್ಯವಸ್ಥೆಯನ್ನೂ ಕಲ್ಪಿಸುವುದಿಲ್ಲ' ಎಂದಿದ್ದಾರೆ.

ಕೆಲಸ ಮುಗಿಸಿ ಮನೆಗೆ ಹೊರಡುವ ವೃತ್ತಿಪರರು ಮೆಟ್ರೋ ರೈಲಿನ ತಾಂತ್ರಿಕ ಸಮಸ್ಯೆಯಿಂದ ಟ್ರಕ್, ಲಾರಿ ಹತ್ತಬೇಕಾಯಿತು.

## ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ವಿಧಾನಸೌಧ ಮುಂಭಾಗದಲ್ಲೂ ವಿಜೃಂಭಣೆಯಿಂದ ಆಚರಿಸಬೇಕು:

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಜೂ.27ರಂದು ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ರಾಜ್ಯ ಸರ್ಕಾರ ವಿಧಾನಸೌಧ ಮುಂಭಾಗದಲ್ಲೂ ವಿಜೃಂಭಣೆಯಿಂದ ಆಚರಿಸಬೇಕು ಎಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷರಾದ ಡಾ.ಎಸ್. ಸಂಗಮೇಶ್ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಬೆಂಗಳೂರು ನಗರ ನಿರ್ಮಾತೃ, ದೂರದೃಷ್ಟಿಯ ಆಡಳಿತಗಾರ ಹಾಗೂ ಕನ್ನಡ ನಾಡಿನ ಹೆಮ್ಮೆಯ ಪ್ರತೀಕವಾಗಿರುವ ನಾಡಪ್ರಭು ಕೆಂಪೇಗೌಡರ ಕೊಡುಗೆಗಳನ್ನು ಮುಂದಿನ ಯುವ ಪೀಳಿಗೆಗೆ ಪರಿಚಯಿಸುವುದು ಸರ್ಕಾರದ ಕರ್ತವ್ಯವಾಗಿದೆ. ಅವರ ಆದರ್ಶಗಳು, ಆಡಳಿತ ದಕ್ಷತೆ ಹಾಗೂ ಅಭಿವೃದ್ಧಿ ಪರಿಕಲ್ಪನೆಗಳು ಇಂದಿಗೂ ಪ್ರಸ್ತುತವಾಗಿದ್ದು, ಅವರ ಸ್ಮರಣಾರ್ಥ ರಾಜ್ಯ ಮಟ್ಟದ ಕಾರ್ಯಕ್ರಮವನ್ನು ವಿಧಾನಸೌಧ ಮುಂಭಾಗದಲ್ಲಿ ಆಯೋಜಿಸಬೇಕು ಎಂದು ಮನವಿ ಮಾಡಿದ್ದಾರೆ.

ರಾಜ್ಯ ಸರ್ಕಾರ ಎಲ್ಲಾ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು ಹಾಗೂ ಸಾರ್ವಜನಿಕ ಸಂಸ್ಥೆಗಳಲ್ಲಿ ಕೆಂಪೇಗೌಡ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು.

ಕೆಂಪೇಗೌಡರ ಜೀವನ, ಸಾಧನೆ, ಇತಿಹಾಸ ಮತ್ತು ಕನ್ನಡ ನಾಡಿಗೆ ನೀಡಿದ ಕೊಡುಗೆ ಗಳ ಕುರಿತು ವಿಶೇಷ ಉಪನ್ಯಾಸಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಒತ್ತಾಯಿಸಿದ್ದಾರೆ.

ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಯುವಜನರಲ್ಲಿ ಬಿತ್ತರಿಸುವ ಉದ್ದೇಶದಿಂದ ರಾಜ್ಯಾದ್ಯಂತ ಜಾಗೃತಿ ಕಾರ್ಯಕ್ರಮಗಳು, ವಿಚಾರ ಸಂಕಿರಣಗಳು ಹಾಗೂ ಯುವ ಸಮಾವೇಶಗಳನ್ನು ಆಯೋಜಿಸಲು ಸರ್ಕಾರ ಮುಂದಾಗಬೇಕು. ಕೆಂಪೇಗೌಡರ ಆಡಳಿತ ನೀತಿಗಳು, ದೂರದೃಷ್ಟಿ ಮತ್ತು ಅಭಿವೃದ್ಧಿ ಚಿಂತನೆಗಳು ಇಂದಿನ ಆಡಳಿತ ವ್ಯವಸ್ಥೆಗೆ ಮಾದರಿಯಾಗಿವೆ ಎಂದು ಹೇಳಿದ್ದಾರೆ.

ಸರ್ಕಾರವು ಕೆಂಪೇಗೌಡ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಕನ್ನಡ ನಾಡಿನ ಸ್ವಾಭಿಮಾನ, ಸಂಸ್ಕೃತಿ ಹಾಗೂ ಪರಂಪರೆಯ ಸಂಕೇತವಾಗಿ ಆಚರಣೆ ಮಾಡಬೇಕು. ಈ ಕುರಿತು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಡಾ. ಎಸ್. ಸಂಗಮೇಶ್ ಎಚ್ಚರಿಕೆ ನೀಡಿದ್ದಾರೆ.

## ನನ್ನ ಹೆಸರಿನಲ್ಲಿರುವುದು 32 ಎಕರೆ ಜಮೀನು ಮಾತ್ರ, 100 ಎಕರೆ ಅಲ್ಲ: ಸಚಿವ ಎಂ.ಬಿ.ಪಾಟೀಲ್‌ಗೆ ಅನಿತಾ ಕುಮಾರಸ್ವಾಮಿ ತಿರುಗೇಟು

• ಉದಯವಾಹಿನಿ, ಬೆಂಗಳೂರು

ಬಿಡದಿ ಬಳಿ ಅನಿತಾ ಕುಮಾರಸ್ವಾಮಿ ಅವರಿಗೆ ಸೇರಿದ ಸುಮಾರು 100 ಎಕರೆ ಜಮೀನು ಇದೆ ಎಂಬ ಸಚಿವ ಎಂ.ಬಿ.ಪಾಟೀಲ್ ಅವರ ಹೇಳಿಕೆಗೆ ಮಾಜಿ ಶಾಸಕಿ ಅನಿತಾ ಕುಮಾರಸ್ವಾಮಿ ಅಸಮಾಧಾನ ಹೊರಹಾಕಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, ನನ್ನ ಹಾಗೂ ನನ್ನ ಕುಟುಂಬದ ಕುರಿತು ಇಲ್ಲಸಲ್ಲದ ಆರೋಪಗಳನ್ನು ಮಾಡಿದರೆ ಕಾನೂನು ಮೂಲಕ ಉತ್ತರ ಕೊಡುತ್ತೇನೆ ಎಂದು ಎಚ್ಚರಿಕೆ ನೀಡಿದ್ದಾರೆ.

ನನ್ನ ಹೆಸರಿನಲ್ಲಿರುವುದು 32 ಎಕರೆ ಜಮೀನು ಮಾತ್ರ, ಸಚಿವರಾದ ಎಂ.ಬಿ.ಪಾಟೀಲ್ ಅವರು ಹೇಳಿರುವಂತೆ 100 ಎಕರೆ ಅಲ್ಲ. ರಾಜಕೀಯ ದುರುದ್ದೇಶಕ್ಕಾಗಿ ಮನೆಯವರನ್ನು ಎಳೆದು ತಂದು ಸುಳ್ಳು ಪ್ರಚಾರ ಮಾಡುವುದು ಯಾರಿಗೂ ಶೋಭೆ ತರುವುದಿಲ್ಲ. ವೈಯಕ್ತಿಕ ವಿಚಾರಗಳ ಬಗ್ಗೆ ಚರ್ಚಿಸುವ


ಉದಯವಾಹಿನಿ ಚಿತ್ರ

ಕೀಳು ಮಟ್ಟಕ್ಕೆ ಯಾರೂ ಹೋಗಬಾರದು. ಅನಗತ್ಯವಾಗಿ ನನ್ನ ಬಗ್ಗೆ, ನನ್ನ ಕುಟುಂಬದ ಕುರಿತು ಇಲ್ಲಸಲ್ಲದ ಆರೋಪಗಳನ್ನು ಮಾಡಿದರೆ ಕಾನೂನು ಮೂಲಕ ಅಂಥವರಿಗೆ ಉತ್ತರ ಕೊಡುತ್ತೇನೆ ಎಂದು ಸಚಿವರ ವಿರುದ್ಧ ಕಿಡಿಕಾರಿದ್ದಾರೆ. ಬಿಡದಿ ಟೌನ್ ಶಿಪ್ ನಿರ್ಮಾಣ ವಿಚಾರದಲ್ಲಿ ಎಚ್.ಡಿ. ಕುಮಾರಸ್ವಾಮಿ ರಾಜಕೀಯ ಮಾಡುತ್ತಿದ್ದಾರೆ. ಈ ಯೋಜನೆಯನ್ನು ಸ್ವತಃ ಕುಮಾರಸ್ವಾಮಿ ಅವರೇ ಪ್ರಾರಂಭಿಸಿದ್ದರು. ಹಾಗಿದ್ದ ಮೇಲೆ ಈಗೇಕೆ ವಿರೋಧ ಮಾಡುತ್ತಿದ್ದಾರೆ ಎಂದು ಸಚಿವ ಎಂ.ಬಿ.ಪಾಟೀಲ್ ಪ್ರಶ್ನಿಸಿದ್ದರು.

ಅಲ್ಲದೇ ಕುಮಾರಸ್ವಾಮಿ ಅವರ ಪತ್ನಿ ಅನಿತಾ ಕುಮಾರಸ್ವಾಮಿ ಅವರಿಗೆ ಸೇರಿದ ಸುಮಾರು 100 ಎಕರೆ ಜಮೀನು ಸಹ ಈ ಯೋಜನೆಯ ವ್ಯಾಪ್ತಿಯಲ್ಲಿ ಬರುತ್ತದೆ. ಈಗ ಈ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿರುವುದು ಶುದ್ಧ ನಾಟಕ ಎಂದು ಟೀಕಿಸಿದ್ದರು.

ಸಚಿವರ ಹೇಳಿಕೆ ಇದೀಗ ಅನಿತಾ ಕುಮಾರಸ್ವಾಮಿ ಅವರು ತಿರುಗೇಟು ನೀಡಿದ್ದಾರೆ.

## ಆಸ್ತಿ ವಿಚಾರಕ್ಕೆ ಜಗಳ; ಪುತ್ರನ ಜತೆ ಸೇರಿ ಹೆತ್ತ ತಾಯಿಯನ್ನೇ ಕೊಲೆಗೈದ ಮಗಳು!

• ಉದಯವಾಹಿನಿ, ಬೆಂಗಳೂರು

ಕುಡಿತದ ಚಟಕ್ಕೆ ಒಳಗಾಗಿದ್ದ ಮಹಿಳೆಯೊಬ್ಬಳು ಆಸ್ತಿ ವಿಚಾರಕ್ಕೆ ನಡೆದ ಜಗಳದ ವೇಳೆ ತನ್ನ ಮಗನ ಜತೆ ಸೇರಿ ಹೆತ್ತ ತಾಯಿಯನ್ನೇ ಕೊಲೆ ಮಾಡಿದ ಆಘಾತಕಾರಿ ಘಟನೆ ಬೆಂಗಳೂರಿನ ಕೆಂಗೇರಿ ವ್ಯಾಪ್ತಿಯಲ್ಲಿ ನಡೆದಿದೆ. 75 ವರ್ಷದ ಜಯಮ್ಮ ಕೊಲೆಯಾದ ವೃದ್ಧೆ. ಪ್ರಕರಣಕ್ಕೆ ಸಂಬಂಧಿಸಿ ಮಗಳು ಭಾಗ್ಯಲಕ್ಷ್ಮಿ ಹಾಗೂ ಮೊಮ್ಮಗ ಕುಶಾಲ್‌ನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ಕೆಂಗೇರಿಯ ಸುಭಾಷ್ ನಗರದಲ್ಲಿ ಈ ಘಟನೆ ನಡೆದಿದೆ. ಭಾನುವಾರ ರಾತ್ರಿ ಕೊಲೆ ನಡೆದಿದ್ದರೂ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಕುಟುಂಬದ ಸದಸ್ಯರೆಲ್ಲರೂ ಕುಡಿತದ ಚಟಕ್ಕೆ ಒಳಗಾಗಿದ್ದರಿಂದ ಆಸ್ತಿ ಮಾರಾಟದ ವಿಚಾರವಾಗಿ ಹಲವು ದಿನಗಳಿಂದ ಜಗಳ ನಡೆಯುತ್ತಿತ್ತು.

ಘಟನೆ ನಡೆದ ರಾತ್ರಿ ಆಸ್ತಿ ಮಾರಾಟದ ಹಣದ ವಿಚಾರಕ್ಕೆ ಜಯಮ್ಮ ಆಕೆಯ ಮಗಳು ಭಾಗ್ಯಲಕ್ಷ್ಮಿ ನಡುವೆ ತೀವ್ರ ವಾಗ್ವಾದ ನಡೆದಿದೆ.

ಮಾತಿನ ಚಕಮಕಿ ಹೆಚ್ಚಾಗಿ ಜಗಳಕ್ಕೆ ತಿರುಗಿದೆ. ಈ ವೇಳೆ ಭಾಗ್ಯಲಕ್ಷ್ಮಿ ಅವರ ಮಗ ಕುಶಾಲ್ ಕೂಡ ಜಗಳಕ್ಕೆ ಸೇರಿಕೊಂಡಿದ್ದಾನೆ. ಈ ವೇಳೆ, ಮನೆಯಲ್ಲಿದ್ದ ಮುದ್ದೆ ಮಾಡುವ ಕೋಲಿನಿಂದ ಜಯಮ್ಮನ ತಲೆಗೆ ಬಲವಾಗಿ ಹೊಡೆದು ಹಲ್ಲೆ ನಡೆಸಿದ್ದು, ವೃದ್ಧೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

## ಮುಂದಿನ ಒಂದು ವಾರ ರಾಜ್ಯದ ಹಲವೆಡೆ ಗುಡುಗು ಸಹಿತ ಭಾರಿ ಮಳೆ ಸಾಧ್ಯತೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಮುಂದಿನ ಒಂದು ವಾರ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಮುನ್ಸೂಚನೆ ನೀಡಿದೆ. ಹಾವೇರಿ, ಧಾರವಾಡ, ಬಿಜಾಪುರ, ಬೆಂಗಳೂರು, ತುಮಕೂರು, ರಾಮನಗರ, ಮೈಸೂರು, ಮಂಡ್ಯದಲ್ಲಿ ಸಾಧಾರಣ ಮಳೆಯಾಗಿದೆ.

# ನೀರಿನ ಪ್ರಮಾಣ ಕಡಿಮೆಯಿದ್ದರೂ ಕೆಆರ್‌ಎಸ್, ಕಬಿನಿ ಜಲಾಶಯಗಳ ಹೊರಹರಿವು ಏರಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಕಾವೇರಿ ಕಣಿವೆ ಭಾಗದ ಜಿಲ್ಲೆಗಳಲ್ಲಿ ಮುಂಗಾರು ಮಳೆಯ ಕೊರತೆಯಿಂದಾಗಿ ಜಲಾಶಯ ಬರ ಛಾಯೆ ಆವರಿಸುತ್ತಿರುವ ಹೊತ್ತಿನಲ್ಲೇ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯುಎಂಎ) ಸಭೆ ನಡೆದ ಮರುದಿನವೇ ಕೃಷ್ಣರಾಜಸಾಗರ ಹಾಗೂ ಕಬಿನಿ ಜಲಾಶಯದ ಹೊರ ಹರಿವು ಪ್ರಮಾಣವನ್ನು ಹೆಚ್ಚಿಸಲಾಗಿದೆ. ಬುಧವಾರ ಬೆಳಿಗ್ಗೆಯಿಂದಲೇ ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಜಲಾಶಯ ಹೊರ ಹರಿವಿನ ಪ್ರಮಾಣವನ್ನು 1886 ಕ್ಯುಸೆಕ್‌ಗೆ ಏರಿಕೆ ಮಾಡಲಾಗಿದೆ. ಅದೇ ರೀತಿ ಮೈಸೂರು ಜಿಲ್ಲೆಯ ಕಬಿನಿ ಜಲಾಶಯದಿಂದ 850 ಕ್ಯೂಸೆಕ್ ನೀರು ಹೊರ ಹರಿಸಲಾಗುತ್ತಿದೆ. ಎರಡೂ ಜಲಾಶಯದಿಂದ ಸೇರಿ ಒಟ್ಟು 2736 ಕ್ಯೂಸೆಕ್ ನೀರು ಹರಿಬಿಡಲಾಗುತ್ತಿದೆ.

ಕೆಆರ್‌ಎಸ್ ಜಲಾಶಯದಿಂದ ಬೆಂಗಳೂರು ಸಹಿತ ವಿವಿಧ ನಗರಗಳ ಕುಡಿಯುವ ನೀರಿಗೆ ಜೂನ್ 23ರಂದು 438, ಜೂನ್ 22ರಂದು 431, ಜೂನ್ 2 ರಂದು 437 ಕ್ಯೂಸೆಕ್ ಹೊರ ಬಿಡಲಾಗಿದೆ.

ಅದೇ ರೀತಿ ಕಬಿನಿ ಜಲಾಶಯದಿಂದ ಜೂನ್ 20 ಹಾಗೂ 22ರಂದು ಯಾವುದೇ ನೀರು ಹರಿ ಬಿಡುತ್ತಿರಲಿಲ್ಲ. ಜೂನ್ 23ರಂದು 300 ಕ್ಯೂಸೆಕ್ ಹರಿಸಲಾಗಿತ್ತು. ಈಗ ಏರಿಕೆ

**ಬೆಂಗಳೂರು ಸಹಿತ ವಿವಿಧ ನಗರಗಳ ಕುಡಿಯುವ ನೀರಿಗೆ ಬಳಸಲಾಗುತ್ತಿದೆ. ತಮಿಳುನಾಡಿಗೆ ಹರಿಸುತ್ತಿಲ್ಲ. ಇಷ್ಟು ನೀರು ಬಿಟ್ಟರೆ ಅದು ತಮಿಳುನಾಡು ತಲುಪುವುದಿಲ್ಲ. ಕೊಳ್ಳೇಗಾಲ ಸಮೀಪದ ಶಿವ ಆಣೆಕಟ್ಟೆಯಲ್ಲಿಯೇ ನೀರಿನ ಪ್ರಮಾಣ ಕಡಿಮೆ ಇರುವುದರಿಂದ ಅಲ್ಲಿ ಸಂಗ್ರಹವಾಗಬಹುದೇ ವಿನಃ ತಮಿಳುನಾಡಿಗೆ ಉಪಯೋಗವಾಗುವುದಿಲ್ಲ ಎಂದು ಹೇಳಿದರು.**

> ಕೃಷ್ಣರಾಜಸಾಗರ ಜಲಾಶಯದಿಂದ ಹೊರಹರಿವಿನ ಪ್ರಮಾಣವನ್ನು ಹೆಚ್ಚಳ ಮಾಡಿದ್ದೇವೆ. ಬೆಂಗಳೂರು ಸಹಿತ ಇತರ ಕಡೆಗಳಿಗೆ ಕುಡಿಯುವ ನೀರಿಗೆ ಇದನ್ನು ಹರಿಸಲಾಗುತ್ತಿದೆ.
> ರಘುರಾಂ, ಅಧೀಕ್ಷಕ ಇಂಜಿನಿಯರ್ ಕೆಆರ್‌ಎಸ್ ಜಲಾಶಯ


ಉದಯವಾಹಿನಿ ಚಿತ್ರ

ಮಾಡಲಾಗಿದೆ. ಸುಪ್ರೀಂ ಕೋರ್ಟ್ ತೀರ್ಪಿನಂತೆ ಕರ್ನಾಟಕ ತಮಿಳುನಾಡು ಗಡಿ ಭಾಗದ ಬಿಳಿಗುಂಡ್ಲುವಿನಿಂದ ಜೂನ್‌ನಲ್ಲಿ 9.19 ಟಿಎಂಸಿ ಅಡಿ ಹರಿಸಬೇಕಿದೆ. ಆದರೆ, ಈವರೆಗೆ 2 ಟಿಎಂಸಿ ಅಡಿ ನೀರನ್ನಷ್ಟೇ ಹರಿಸಲಾಗಿದೆ. ಇದರ ನಡುವೆ, ನವದೆಹಲಿಯಲ್ಲಿ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ಸಭೆಯಲ್ಲಿ ಕಾವೇರಿ ನೀರಿನ ಬಗ್ಗೆ ಪ್ರಸ್ತಾಪವಾಗಿತ್ತು. ಜೂನ್ ತಿಂಗಳ ಪಾಲಿನ ನೀರನ್ನು ಕರ್ನಾಟಕ ಹರಿಸಿಲ್ಲ ಎಂದು ತಮಿಳುನಾಡು ಆಕ್ಷೇಪ ವ್ಯಕ್ತಪಡಿಸಿತ್ತು.

ನಾಲ್ಕು ಜಲಾಶಯಗಳಲ್ಲಿನ ನೀರಿನ ಸಂಗ್ರಹದ ಬಗ್ಗೆ ಕರ್ನಾಟಕದ ಅಧಿಕಾರಿಗಳು ವಿವರ ನೀಡಿ, ಈ ನೀರು ಕುಡಿಯುವ ಬಳಕೆಗಷ್ಟೇ ಸಾಕಾಗುತ್ತದೆ ಎಂದು ಮನವರಿಕೆ ಮಾಡಿಕೊಟ್ಟಿದ್ದರು. ಈ ನೀರನ್ನು ಕುಡಿಯುವುದಕ್ಕೆ ಬಳಸಲು ಆದ್ಯತೆ ನೀಡಬೇಕು. ಕಡಿಮೆ ನೀರು ಬಯಸುವ ಬೆಳೆಗಳನ್ನು ಈ ವರ್ಷ ಬೆಳೆಯಬೇಕು ಎಂದು ಸಮಿತಿಯು ರಾಜ್ಯಗಳಿಗೆ ನಿರ್ದೇಶನ ನೀಡಿತ್ತು. ಇದರ ನಡುವೆಯೂ ನೀರು ಹೊರ ಹರಿಸುವ ಪ್ರಮಾಣದಲ್ಲಿ ಏರಿಕೆ ಕಂಡು ಬಂದಿದೆ.

ರಾಜ್ಯದಲ್ಲಿ ಈ ಬಾರಿ ಮಳೆ ಕೊರತೆಯಾಗಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿನ ಜಲಾಶಯಗಳಲ್ಲಿ ವಾಡಿಕೆಯಷ್ಟು ನೀರು ಸಂಗ್ರಹವೇ ಆಗಿಲ್ಲ. ಕೆಆರ್‌ಎಸ್, ಹೇಮಾವತಿ, ಕಬಿನಿ ಹಾಗೂ ಹಾರಂಗಿ ಜಲಾಶಯಗಳಲ್ಲಿ ನಿತ್ಯದ ಒಳ ಹರಿವು ಒಂದು ಸಾವಿರ ಕ್ಯುಸೆಕ್‌ನಪ್ಪಿದೆ. ಕೆಆರ್‌ಎಸ್‌ಗೆ 689, ಕಬಿನಿಗೆ 259, ಹಾರಂಗಿಗೆ 304 ಕ್ಯುಸೆಕ್ ನೀರು ಬುಧವಾರ ಬೆಳಿಗ್ಗೆ ಹರಿದು ಬರುತ್ತಿದೆ. ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ 81.30 ಅಡಿ, ಕಬಿನಿ ಜಲಾಶಯದ ನೀರಿನ ಮಟ್ಟ 2253.89 ಅಡಿ, ಹಾರಂಗಿ ಜಲಾಶಯದ ನೀರಿನ ಮಟ್ಟ 2825.79 ಅಡಿಯಷ್ಟಿದೆ.

ಕಾವೇರಿ ಜಲವಿವಾದ ನ್ಯಾಯಮಂಡಳಿಯ ತೀರ್ಪನ್ನು ಮಾರ್ಪಡಿಸಿ, 2018ರಲ್ಲಿ ಸುಪ್ರೀಂ ಕೋರ್ಟ್ ತೀರ್ಪು ನೀಡಿತ್ತು.

ಕಾವೇರಿ ಜಲಾನಯನ ಪ್ರದೇಶದಲ್ಲಿ ವಾಡಿಕೆಯಷ್ಟು ಮಳೆಯಾದರೆ ವಾರ್ಷಿಕ 740 ಟಿಎಂಸಿಯಷ್ಟು ನೀರು ಲಭ್ಯವಾಗುತ್ತದೆ ಎಂಬುದನ್ನು ಕರ್ನಾಟಕ, ತಮಿಳುನಾಡು, ಕೇರಳ ಮತ್ತು ಪುದುಚೇರಿ ಒಪ್ಪಿಕೊಂಡಿವೆ. ಲಭ್ಯವಿರುವ 740 ಟಿಎಂಸಿ ನೀರಿನಲ್ಲಿ ಕರ್ನಾಟಕಕ್ಕೆ 284.75 ಟಿಎಂಸಿ, ತಮಿಳುನಾಡಿಗೆ 404.25 ಟಿಎಂಸಿ, ಕೇರಳಕ್ಕೆ 30 ಟಿಎಂಸಿ ಮತ್ತು ಪುದುಚೇರಿಗೆ 7 ಟಿಎಂಸಿಯಷ್ಟು ನೀರನ್ನು ಸುಪ್ರೀಂ ಕೋರ್ಟ್ ಮರುಹಂಚಿಕೆ ಮಾಡಿತ್ತು. ನೀಡಿದ ಕೃಷ್ಣರಾಜಸಾಗರ ಜಲಾಶಯದ ಅಧೀಕ್ಷಕ ಇಂಜಿನಿಯರ್ ರಘುರಾಂ, 'ಕೆಆರ್‌ಎಸ್ ಜಲಾಶದಿಂದ ಒಳಹರಿವಿನ ಪ್ರಮಾಣವನ್ನು ಏರಿಕೆ ಮಾಡಿದ್ದೇವೆ.

# ಜುಲೈ 7ರಂದು ಮಂಡ್ಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಲೋಕ ಅದಾಲತ್ ಮೂಲಕ ರಾಜಿ ಆಗಬಹುದಾಂತಹ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಜುಲೈ 7 ರಂದು ನಗರದ ನ್ಯಾಯಾಲಯ ಆವರಣದಲ್ಲಿ ಅದಾಲತ್ ಆಯೋಜಿಸಿದ್ದು, ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಜೆ.ಎನ್.ಸುಬ್ರಮಣ್ಯ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಆಸ್ತಿ ವಿವಾದ, ಸಿವಿಲ್ ವ್ಯಾಜ್ಯ, ವಿಭಾಗದ ದಾವೆ, ಹಣ ವಸೂಲಾತಿ ದಾವೆ, ನಿರ್ದಿಷ್ಟ ಪರಿಹಾರ ಕಾಯ್ದೆಯಡಿ ದಾಖಲಿಸಿರುವ ದಾವೆಗಳನ್ನು ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದರು.

ಅದಾಲತ್ ಪೀಠದಲ್ಲಿ ನ್ಯಾಯಾಧೀಶರು ಮತ್ತು ನುರಿತು ವಕೀಲರು ಕುಳಿತು ವಾದಿ ಪ್ರತಿವಾದಿಗಳನ್ನು ಕೂರಿಸಿಕೊಂಡು ಅವರ ಮನವೊಲಿಸಿ ವ್ಯಾಜ್ಯಕ್ಕೆ ಅವರ ಸಮಕ್ಷಮದಲೇ ಪರಿಹಾರ ಕಂಡುಕೊಳ್ಳಬಹುದು ಎಂದರು.

**ಶೇ 50ರಷ್ಟು ರಿಯಾಯಿತಿ:** ಸಾರಿಗೆ ಇಲಾಖೆಯಲ್ಲಿ 1991ರಿಂದ 2022ರ ಅವಧಿಯಲ್ಲಿ ದಾಖಲಾಗಿರುವ ಹಾಗೂ ಬಾಕಿ ಇರುವ ಪ್ರಕರಣಗಳು ಹಾಗೂ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ 2023 ಫೆಬ್ರುವರಿ 11ರೊಳಗೆ ದಾಖಲಾದ ಪ್ರಕರಣಗಳಿಗೆ ದಂಡದ ಮೊತ್ತದಲ್ಲಿ ಶೇ 50ರಷ್ಟು ರಿಯಾಯಿತಿ ಇದೆ. 2026 ಜೂನ್ 21ರಿಂದ ಜುಲೈ 10ರೊಳಗೆ ಕಾಲಾವಕಾಶ ನೀಡಲಾಗಿದೆ. ನಗರ ಸಂಚಾರ ಪೊಲೀಸ್ ಠಾಣೆ ಮತ್ತು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಯಲ್ಲಿ ಕೌಂಟರ್‌ಗಳಲ್ಲಿ ದಂಡ ಪಾವತಿಸಬಹುದು ಎಂದು ವಿವರಿಸಿದರು.

2026ರ ಸುಪ್ರೀಂಕೋರ್ಟ್ ವಿಶೇಷವಾಗಿ 'ಸಮಾಧಾನ ಸಮಾರೋಹ' ವಿಶೇಷ ಲೋಕ ಅದಾಲತ್ ಅನ್ನು ಆಗಸ್ಟ್ 21, 22 ಹಾಗೂ 23ರಂದು ಆಯೋಜಿಸಿದೆ.

ಜಿಲ್ಲೆಗೆ ಸಂಬಂಧಿಸಿದ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ 21 ಪ್ರಕರಣಗಳು ಗುರುತಿಸಲಾಗಿದೆ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ಆನಂದ್, ಡಿವೈಎಸ್‌ಪಿ ಶಿವಮೂರ್ತಿ, ವಕೀಲರ ಸಂಘದ ಅಧ್ಯಕ್ಷ ಸತ್ಯಾನಂದ, ಉಪಾಧ್ಯಕ್ಷ ಮರಿಗೌಡ ಭಾಗವಹಿಸಿದ್ದರು.


ಉದಯವಾಹಿನಿ

ಪ್ರಾದೇಶಿಕ

ಗುರುವಾರ 25 ಜೂನ್ 2026




## ಮಿನಿ ನ್ಯೂಸ್

### ಚಾಮರಾಜನಗರದಲ್ಲಿ ಪ್ರತ್ಯೇಕ ಜೂಜಾಟ ಪ್ರಕರಣ: 48 ಮಂದಿಯ ಬಂಧನ,

• ಉದಯವಾಹಿನಿ, ಚಾಮರಾಜನಗರ

ಜಿಲ್ಲೆಯ ಕೊಳ್ಳೇಗಾಲ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಪ್ರತ್ಯೇಕ ಜೂಜಾಟ ಪ್ರಕರಣದಲ್ಲಿ ಒಟ್ಟು 48 ಮಂದಿಯನ್ನು ಬಂಧಿಸಿದ್ದಾರೆ. ಕೊಳ್ಳೇಗಾಲದ ಶಿವನಸಮುದ್ರದ ಮಾರಮ್ಮ ದೇವಾಲಯ ಬಳಿಯ ಚಂದನ ಪಾರ್ಟಿ ಹಾಲ್‌ನಲ್ಲಿ ಜೂಜಾಟ ಆಡುತ್ತಿದ್ದ ಚಂದನ್, ಮಂಟ್ಯ, ಶಿವು, ಸುದೀಪ್ ಸೇರಿದಂತೆ ಒಟ್ಟು 5 ಮಂದಿಯನ್ನು ಬಂಧಿಸಿ, ಪಣಕ್ಕಿಟ್ಟಿದ್ದ 4,700 ರೂ.ಗಳನ್ನು ವಶಕ್ಕೆ ಪಡೆದಿದ್ದಾರೆ.

ಎರಡನೇ ಪ್ರಕರಣದಲ್ಲಿ ಚಿಕ್ಕಲ್ಲೂರು ಗ್ರಾಮದ ಕೆಆರ್‌ಎಸ್ ಪಾರ್ಟಿ ಹಾಲ್‌ನಲ್ಲಿ ಜೂಜಾಟ ಆಡುತ್ತಿದ್ದ ಸುರೇಶ್ ಹಾಗೂ 36 ಮಂದಿಯನ್ನು ಬಂಧಿಸಿ ಅಂದರ್ - ಬಾಹರ್ ಜೂಜಾಟದಲ್ಲಿ ಪಣಕ್ಕಿಟ್ಟಿದ್ದ 3.12 ಲಕ್ಷ ರೂ.ಗಳನ್ನು ವಶಕ್ಕೆ ಪಡೆದಿದ್ದಾರೆ.

ಮೂರಣೆ ಪ್ರಕರಣದಲ್ಲಿ ಚಿಕ್ಕಲ್ಲೂರಿನ ಚಾಮುಂಡೇಶ್ವರಿ ಪಾರ್ಟಿ ಹಾಲ್‌ನಲ್ಲಿ ಅಂದರ್‌ಬಾಹರ್ ಜೂಜಾಟ ಆಡುತ್ತಿದ್ದ ಮಹಾದೇವ, ರವಿಚಂದ್ರ ಸೇರಿದಂತೆ ಮೈಸೂರು ಜಿಲ್ಲೆಯ 7 ಮಂದಿಯನ್ನು ಬಂಧಿಸಿ 61 ಸಾವಿರ ರೂಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಮೂರು ಪ್ರಕರಣಗಳು ಕೊಳ್ಳೇಗಾಲ ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಮೂರು ಕೇಸ್‌ಗಳು ದಾಖಲಾಗಿದೆ, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

### ಜೂ.26 ರಿಂದ 'ನಾನೂ ನಾಯಕಿ' ಮೂರು ದಿನಗಳ ಮಹಿಳಾ ಸಮಾವೇಶ - ರವಿಕುಮಾರ್ ಗೌಡ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ರಾಮನಗರದ ಜಾನಪದ ಲೋಕದಲ್ಲಿ ಮೂರು ದಿನಗಳ ಕಾಲ ನಾನು ನಾಯಕಿ ರಾಜ್ಯಮಟ್ಟದ ಮಹಿಳಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ರವಿಕುಮಾರ್ ಗೌಡ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ಜಿಲ್ಲೆಯಿಂದ ಹತ್ತು ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಅವರಿಗೆ ಮೌಢ್ಯವನ್ನು ತೊಲಗಿಸಿ ವಿಜ್ಞಾನದ ಬಗ್ಗೆ ಅರಿವು ಮೂಡಿಸುವ ತರಬೇತಿ ನೀಡಲಾಗುವುದು ಎಂದರು. ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಹುಲಿಕಲ್ ನಟರಾಜ್ ಮಾತನಾಡಿ, 42 ಸಾವಿರ ಸದಸ್ಯರು ರಾಜ್ಯಾದ್ಯಂತ ನೊಂದಾವಣೆ ಮಾಡಿಕೊಂಡಿದ್ದಾರೆ. ಮೌಢ್ಯತೆ ತೊಲಗಿಸಲು ವಿಜ್ಞಾನದ ಬಗ್ಗೆ ಅರಿವು ಮೂಡಿಸಲಾಗುತ್ತಿದ್ದು, ಮೂರು ದಿನಗಳ ಕಾರ್ಯಕ್ರಮದಲ್ಲಿ ವೈಜ್ಞಾನಿಕವಾಗಿ ತರಭೇತಿ ನೀಡಲಾಗುವುದು ಎಂದರು.

ನಿವೃತ್ತ ಹಿರಿಯ ಹೈಕೋರ್ಟ್ ನ್ಯಾಯಮೂರ್ತಿಗಳಾದ ನಾಗಮೋಹನ್ ದಾಸ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಇಸ್ರೋ ಮುಖ್ಯಸ್ಥ ಕಿರಣ್ ಕುಮಾರ್ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮೂರು ದಿನಗಳು ನಡೆಯುವ ಕಾರ್ಯಕ್ರಮದ ಸಂದರ್ಭದಲ್ಲಿ ಗೌಡಗೆರೆ ಗ್ರಾಮದಲ್ಲಿ ದೀಪೋತ್ಸವ ಮತ್ತು ವಸ್ತು ಸಂಗ್ರಹಾಲಯ ವೀಕ್ಷಣೆ ಮಾಡಲು ಕರೆದೊಯ್ಯಲಾಗುವುದು. ಊಟ ಮತ್ತು ವಸತಿ ವ್ಯವಸ್ಥೆಯೊಂದಿಗೆ ಸುಮಾರು ಮುನ್ನೂರು ಮಹಿಳೆಯರಿಗೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು. ಸಮಾವೇಶ ಆಯೋಜನೆಗೆ ಶ್ರಮಿಸುತ್ತಿರುವ ರೇಣುಕಾ ಪ್ರಸಾದ್, ಶಿವಕುಮಾರ್, ಎನ್.ವಿ.ಲೋಕೇಶ್, ಗೋವಿಂದಯ್ಯ, ಶಶಿಕಲಾ, ವಿಜಯ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

### ಕೆ.ಆರ್.ನಗರ ರೋಟರಿ ಕ್ಲಬ್‌ಗೆ ಗ್ಲೋಬಲ್ ಎಕ್ಸಲೆನ್ಸ್ ಅವಾರ್ಡ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್ ನಗರ

ಪ್ರಸಕ್ತ ಸಾಲಿನಲ್ಲಿ ಗಮನಾರ್ಹ ಸಾಧನೆ ಮಾಡಿರುವ ಇಲ್ಲಿನ ರೋಟರಿ ಕ್ಲಬ್, ಜಿಲ್ಲಾ ಮಟ್ಟದ ಪ್ರತಿಷ್ಠಿತ ಗ್ಲೋಬಲ್ ಎಕ್ಸಲೆನ್ಸ್ ಅವಾರ್ಡ್ ಸೇರಿದಂತೆ ಹಲವು ಪ್ರಶಸ್ತಿ ತನ್ನದಾಗಿಸಿಕೊಂಡಿದೆ.

ಜಿಲ್ಲಾ ರೋಟರಿ 3181 ಕ್ಲಬ್ ವತಿಯಿಂದ ಮೈಸೂರಿನಲ್ಲಿ ಈಚೆಗೆ ನಡೆದ ಅನುಬಂಧ ಅವಾರ್ಡ್ಸ್ ನೈಟ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರೋಟರಿ ಕ್ಲಬ್ ಜಿಲ್ಲಾ ಗವರ್ನರ್ ಪಿ.ಕೆ.ರಾಮಕೃಷ್ಣ, ಸಹಾಯಕ ಗವರ್ನರ್ ರಾಜೇಗೌಡ, ವಲಯ ಸೇನಾನಿ ನಾಗರಾಜ್ ಬಾವಿಕಟ್ಟಿ ಅವರಿಂದ ಪ್ರತಿಷ್ಠಿತ ಗ್ಲೋಬಲ್ ಎಕ್ಸಲೆನ್ಸ್ ಅವಾರ್ಡ್, ಅಡಾಪ್ಟ್ ಎಬಿಲಿಟಿ ಎಕ್ಸಲೆನ್ಸ್ ಅವಾರ್ಡ್, ಇಂಪ್ಯಾಕ್ಟ್ ಎಕ್ಸಲೆನ್ಸ್ ಅವಾರ್ಡ್, ರೀಚ್ ಎಕ್ಸಲೆನ್ಸ್ ಅವಾರ್ಡ್ ಸೇರಿದಂತೆ ಹಲವು ಜಿಲ್ಲಾ ಮಟ್ಟದ ಪ್ರಶಸ್ತಿ ಪಡೆದಿದೆ.

ಕ್ಲಬ್ ಅಧ್ಯಕ್ಷ ಟಿ.ಎನ್.ದಯಾನಂದ, ಕಾರ್ಯದರ್ಶಿ ಕೆ.ಆರ್.ಪುರುಷೋತ್ತಮ, ಖಜಾಂಚಿ ಅಶೋಕ್ ಕುಮಾರ್, ಉಪಾಧ್ಯಕ್ಷ ಅರುಣ ಬಿ.ನರಗುಂದ, ನಿರ್ದೇಶಕರಾದ ಸಿ.ವಿ.ಮೋಹನ್ ಕುಮಾರ್, ವೈ.ಬಿ.ಶಶಿಭೂಷಣ್, ರಾಘವೇಂದ್ರ, ಸದಸ್ಯರಾದ ಎಸ್.ಅರುಣ್ ಕುಮಾರ್, ವೈ.ಎಸ್.ಕುಮಾರ್, ಬಿ.ಕೆ.ಸುರೇಶ್, ಎಂಜಿನಿಯರ್ ಕುಮಾರ್, ಸಿ.ಆರ್.ಮಧುಸೂಧನ್ ಪ್ರಶಸ್ತಿ ಸ್ವೀಕರಿಸಿದರು.

ಸದಸ್ಯತ್ವ ಅಭಿವೃದ್ಧಿ, ಶಿಕ್ಷಣ, ಆರೋಗ್ಯ, ಪರಿಸರ ಸಂರಕ್ಷಣೆ, ಮಹಿಳಾ ಸಬಲೀಕರಣ ಸೇರಿದಂತೆ ವಿವಿಧ ಸಮಾಜಮುಖಿ ಸೇವಾ ಕಾರ್ಯ ಪರಿಗಣಿಸಿ ಪ್ರಶಸ್ತಿ ನೀಡಲಾಗಿದೆ.

### ಪಾಂಡವಪುರದಲ್ಲಿ ಸೋಲಾರ್ ಬೆಲ್ಲ ತಯಾರಿಕಾ ಘಟಕಕ್ಕೆ ಚಾಲನೆ

• ಉದಯವಾಹಿನಿ, ಪಾಂಡವಪುರ

ತಾಲ್ಲೂಕಿನ ಚಿಕ್ಕಬ್ಯಾಡಹರಹಳ್ಳಿಯಲ್ಲಿ ಪುಟ್ಟಣ್ಣಯ್ಯ ಫೌಂಡೇಷನ್ ಮತ್ತು ಸೆಲ್ಕೋ ಫೌಂಡೇಷನ್‌ನಿಂದ 'ಸಿಹಿ ಭವಿಷ್ಯದತ್ತ ಹೊಸ ಹೆಜ್ಜೆ' ಎಂಬ ಧ್ಯೇಯವಾಕ್ಯದಡಿ ಸೋಲಾರ್ ಚಾಲಿತ ಮಿನಿ ಬೆಲ್ಲ ತಯಾರಿಕಾ ಘಟಕಕ್ಕೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೋಮವಾರ ಚಾಲನೆ ನೀಡಿದರು.

ಫೌಂಡೇಷನ್‌ನಿಂದ ಮಹಿಳೆಯರಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಡಲು ಹಲವು ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯ ಉತ್ಪನ್ನಗಳನ್ನು ಬಳಸಿಕೊಂಡು ಸಣ್ಣ ಉದ್ಯಮವನ್ನು ಅಭಿವೃದ್ಧಿಗೊಳಿಸುವ ಅಗತ್ಯವಿದೆ.

ಈ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವ ನಿಟ್ಟಿನಲ್ಲಿ ಪುಟ್ಟಣ್ಣಯ್ಯ ಫೌಂಡೇಷನ್ ವತಿಯಿಂದ 'ಮೇಲುಕೋಟೆ ಬ್ರ್ಯಾಂಡ್' ಅಭಿವೃದ್ಧಿಗೊಳಿಸಲಾಗುತ್ತಿದೆ. ಉದ್ಯಮಿ ಸೌಮ್ಯ ಅವರ ಮಿನಿ ಬೆಲ್ಲ ತಯಾರಿಕಾ ಘಟಕಕ್ಕೆ 7ಲಕ್ಷ ವೆಚ್ಚದಲ್ಲಿ 6.5 ಕೆ.ವಿ. ಸೋಲಾರ್ ಅಳವಡಿಸಿಕೊಡಲಾಗುತ್ತಿದೆ.

ಇದರಿಂದ ವಿದ್ಯುತ್ ಉಳಿತಾಯದ ಜತೆಗೆ ವೆಚ್ಚದ ಹಣ ಕೂಡ ಉಳಿಯಲಿದೆ ಎಂದು ಹೇಳಿದರು. ಉದ್ಯಮಿ ಸೌಮ್ಯ ಮಾತನಾಡಿ, 'ಜಮೀನಿನಲ್ಲಿ ಬೆಳೆಯುತ್ತಿದ್ದ ಸಾವಯವ ಕಬ್ಬನ್ನು ಬೇರೆಯವರಿಗೆ ಪೂರೈಕೆ ಮಾಡುತ್ತಿದ್ದೆ.

## ಹಲಗೂರಿನಲ್ಲಿ ಸಾರ್ವಜನಿಕರ ಕುಂದುಕೊರತೆ ಸಭೆ: ಎಚ್.ಜಿ. ಶ್ರೀನಿವಾಸ್ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹಲಗೂರು

ಜಿಲ್ಲಾ ಪಂಚಾಯಿತಿ ಸಿಇಒ ನಿರ್ದೇಶನದಂತೆ ಒಂದು ವರ್ಷದಿಂದ ಪ್ರತಿ ಪಂಚಾಯಿತಿ ಮಟ್ಟದಲ್ಲಿ ಸಾರ್ವಜನಿಕರ ಕುಂದುಕೊರತೆ ಸಭೆ ನಡೆಸಲಾಗುತ್ತಿದ್ದು, ಸಾರ್ವಜನಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಾಲ್ಲೂಕು ಪಂಚಾಯಿತಿ ಇಒ ಎಚ್.ಜಿ. ಶ್ರೀನಿವಾಸ್ ಮನವಿ ಮಾಡಿದರು.

ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ನಿಟ್ಟೂರು ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಈಚೆಗೆ ಏರ್ಪಡಿಸಿದ್ದ ಹಲಗೂರು ಹೋಬಳಿ ಮಟ್ಟದ ಕುಂದುಕೊರತೆ ಸಭೆಯಲ್ಲಿ ಅವರು ಮಾತನಾಡಿದರು. 14 ವರ್ಷ ತುಂಬಿದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಗರ್ಭಕಂಠ ಕ್ಯಾನ್ಸರ್ ತಡೆಯುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಉಚಿತ ಎಚ್.ಪಿ.ವಿ ಲಸಿಕೆ ನೀಡಲಾಗುತ್ತಿದೆ. ಸಾರ್ವಜನಿಕರು ತಪ್ಪು ಕಲ್ಪನೆಗಳನ್ನು ಬಿಟ್ಟು, ಲಸಿಕೆ ಅಭಿಯಾನದಲ್ಲಿ ಸಹಕರಿಸಬೇಕು ಎಂದು ಕೋರಿದರು.

ನಿಟ್ಟೂರು ಗ್ರಾಮದಲ್ಲಿ ಎರಡು ಕೊಳವೆಬಾವಿಗಳಿದ್ದು ಒಂದು ದುರಸ್ತಿಯಲ್ಲಿದೆ. ಇದರಿಂದಾಗಿ ಕುಡಿಯುವ ನೀರಿನ ಕೊರತೆ ಎದುರಾಗಿದೆ. ಅಧಿಕಾರಿಗಳಿಗೆ ಕರೆ ಮಾಡಿದರೂ ಕರೆಗೆ ಸ್ಪಂದಿಸುತ್ತಿಲ್ಲ ಎಂದು ಸಾರ್ವಜನಿಕರು ದೂರಿದರು.

ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಅಕ್ರಮ ಸಂಪರ್ಕಗಳನ್ನು ಪತ್ತೆ ಹಚ್ಚಿ, ಕಡಿತಗೊಳಿಸಬೇಕು. ಈಗಾಗಲೇ ಇರುವ ಕೊಳವೆಬಾವಿಗಳಲ್ಲಿನ ನೀರು ಪರೀಕ್ಷಿಸಿ, ಖಾಸಗಿ ಕೊಳವೆಬಾವಿಗಳನ್ನು ಗುತ್ತಿಗೆಗೆ ಪಡೆದು ಕುಡಿಯುವ ನೀರು ಪೂರೈಸಲು ಕ್ರಮವಹಿಸಬೇಕು ಎಂದು ಇಒ ಸೂಚಿಸಿದರು.

**ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸುಲಭವಾಗಿ, ಉಚಿತ ಬಸ್ ಪಾಸ್ ವ್ಯವಸ್ಥೆ ಪಡೆಯಬಹುದು. ಇದು ವಿದ್ಯಾರ್ಥಿಗಳ ಶಿಕ್ಷಣದ ವೆಚ್ಚವನ್ನು ಇಳಿಸಲು ಬಹಳಷ್ಟು ಸಹಕಾರಿಯಾಗಿದೆ. ಮೈಸೂರು ಜಿಲ್ಲೆಯೊಂದರಲ್ಲೇ 18 ಸಾವಿರ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಿಸಲು ಸಿದ್ಧತೆ ಮಾಡಿಕೊಂಡಿದೆ.**

## 18ಸಾವಿರ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಶಿಕ್ಷಣ ಪಡೆಯುವ ವಿದ್ಯಾರ್ಥಿಗಳ ಮೇಲಿನ ಆರ್ಥಿಕ ಹೊರೆ ತಗ್ಗಿಸುವ ಉದ್ದೇಶದಿಂದ ರಾಜ್ಯ ಸರಕಾರ ಜಾರಿಗೆ ತಂದಿರುವ ಉಚಿತ ಬಸ್ ಪಾಸ್ ಯೋಜನೆಯಂತೆ ಮೈಸೂರು ನಗರ ಮತ್ತು ಜಿಲ್ಲಾ ವಿಭಾಗಗಳಿಂದ ಶಾಲಾ- ಕಾಲೇಜಿನ ಒಟ್ಟು 18 ಸಾವಿರ ವಿದ್ಯಾರ್ಥಿಗಳಿಗೆ ಸಕಲ ಸಿದ್ಧತೆಯೊಂದಿಗೆ ಕೆಎಸ್‌ಆರ್‌ಟಿಸಿ ಉಚಿತ ಬಸ್ ಪಾಸ್ ವಿತರಣೆ ಆರಂಭಿಸಿದೆ. ರಾಜ್ಯ ಸರಕಾರದ ಈ ಮಹತ್ವಾಕಾಂಕ್ಷಿ ಯೋಜನೆಯಡಿ ಮೊದಲ ಬಾರಿಗೆ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತವಾಗಿ ಬಸ್ ಪಾಸ್ ನೀಡಲಾಗುತ್ತಿದೆ.

ಇದರಿಂದ ನಿತ್ಯ ದೂರದ ಊರುಗಳಿಂದ ಶಾಲೆ-ಕಾಲೇಜುಗಳಿಗೆ ಪ್ರಯಾಣಿಸುವ ಸಾವಿರಾರು ವಿದ್ಯಾರ್ಥಿಗಳಿಗೆ ನೇರ ಪ್ರಯೋಜನ ದೊರೆಯಲಿದ್ದು, ಶಿಕ್ಷಣದ ಅವಕಾಶಗಳು ಇನ್ನಷ್ಟು ಸುಲಭವಾಗಿ ಲಭ್ಯವಾಗಲಿವೆ.

ಗ್ರಾಮೀಣ ಪ್ರದೇಶಗಳ ಅನೇಕ ವಿದ್ಯಾರ್ಥಿಗಳು ಪ್ರತಿದಿನ ಪ್ರಯಾಣ ವೆಚ್ಚದ ಕಾರಣದಿಂದಲೇ ಶಿಕ್ಷಣದಲ್ಲಿ ಹಿನ್ನಡೆ ಅನುಭವಿಸುವ ಪರಿಸ್ಥಿತಿ ಕಂಡುಬರುತ್ತಿತ್ತು.

ಉಚಿತ ಬಸ್ ಪಾಸ್ ಯೋಜನೆಯಿಂದ ಅಂತಹ ವಿದ್ಯಾರ್ಥಿಗಳಿಗೆ ನಿರಾಳವಾಗಿ ವಿದ್ಯಾಭ್ಯಾಸ ಮುಂದುವರಿಸುವ ಅವಕಾಶ ಸಿಗಲಿದೆ. ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳಿಗೆ ಇದು ದೊಡ್ಡ ನೆರವಾಗಲಿದೆ. ಸಾರಿಗೆ ವೆಚ್ಚದ ಉಳಿತಾಯದಿಂದ ಪೋಷಕರ ಮೇಲಿನ ಆರ್ಥಿಕ ಹೊರೆ ಕಡಿಮೆಯಾಗುವುದರ ಜತೆಗೆ ವಿದ್ಯಾರ್ಥಿಗಳ ಶಾಲಾ-ಕಾಲೇಜು ಹಾಜರಾತಿಯೂ ಹೆಚ್ಚುವ ನಿರೀಕ್ಷೆ ಇದೆ. ಶಿಕ್ಷಣದ ಹಕ್ಕು ಎಲ್ಲರಿಗೂ ಸಮಾನವಾಗಿ ದೊರೆಯಬೇಕು ಎಂಬ ಸರಕಾರದ ಆಶಯಕ್ಕೆ ಈ ಯೋಜನೆ ಪೂರಕವಾಗಿದೆ.

### ಮೈಸೂರು ನಗರ ಬಸ್ ನಿಲ್ದಾಣದಲ್ಲಿಯೂ ಪಾಸ್ ವ್ಯವಸ್ಥೆ

ಜೂ.12ರಿಂದಲೇ ಉಚಿತ ಬಸ್ ಪಾಸ್ ವಿತರಣೆಗೆ ಅವಕಾಶ ಮಾಡಿಕೊಡಲಾಗಿದೆ. ಜಿಲ್ಲೆಯ ಸುಮಾರು 18 ಸಾವಿರ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಲಿದ್ದಾರೆ ಎಂದು ಕೆಎಸ್‌ಆರ್‌ಟಿಸಿ ನಗರ ವಿಭಾಗೀಯ ನಿಯಂತ್ರಣಾಧಿಕಾರಿ ಜಗದೀಶ್ ತಿಳಿಸಿದರು.



## ಚನ್ನಪಟ್ಟಣ ಬಸ್ ನಿಲ್ದಾಣದಲ್ಲಿ ಹೆಚ್ಚಿನ ದರಕ್ಕೆ ತಿನಿಸು ಮಾರಾಟಕ್ಕೆ ದಂಡ

• ಉದಯವಾಹಿನಿ, ಚನ್ನಪಟ್ಟಣ


ಉದಯವಾಹಿನಿ ಚಿತ್ರ

ಇಲ್ಲಿನ ಬಸ್ ನಿಲ್ದಾಣದಲ್ಲಿರುವ ಅಂಗಡಿ ಮಳಿಗೆಗಳಲ್ಲಿ ತಿಂಡಿ-ತಿನಿಸುಗಳನ್ನು ನಿಗದಿಪಡಿಸಿದ ದರಕ್ಕಿಂತಲೂ ಹೆಚ್ಚಿನ ಮೊತ್ತಕ್ಕೆ ಮಾರಾಟ ಮಾಡುತ್ತಿರುವ ದೂರಿನ ಹಿನ್ನೆಲೆಯಲ್ಲಿ, ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕಿ ಸ್ನೇಹ ಪಿ.ವಿ ಅವರ ನೇತೃತ್ವದಲ್ಲಿ ಪೊಲೀಸರು ಅಂಗಡಿಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ ತಪಾಸಣೆ ನಡೆಸಿದರು.

ಈ ವೇಳೆ ಅಂಗಡಿಯವರು ಪ್ಯಾಕ್ ಆಗಿರುವ ತಿನಿಸುವ ಮೇಲಿರುವ ನಿಗದಿತ ದರಕ್ಕಿಂತಲೂ ಹೆಚ್ಚಿನ ದರವನ್ನು ಗ್ರಾಹಕರಿಂದ ಪಡೆದು ಮಾರಾಟ ಮಾಡುತ್ತಿರುವುದು ಕಂಡುಬಂತು. ಕಾರ್ಯಾಚರಣೆ ವೇಳೆ ಲೋಕಾಯುಕ್ತ ಪೊಲೀಸರ ಜೊತೆಗಿದ್ದ ಕಾನೂನುಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕಿ ಸುಜಾತ ಅವರು ಅಂಗಡಿ ಮಾಲೀಕರಿಗೆ 5 ಸಾವಿರ ದಂಡ ವಿಧಿಸಿದರು. ನಿಲ್ದಾಣದಲ್ಲಿರುವ ಅಂಗಡಿಗಳಲ್ಲಿ ಏನೇ ಖರೀದಿಸಿದರೂ ಹೆಚ್ಚುವರಿ ಮೊತ್ತ ತೆಗೆದುಕೊಳ್ಳುತ್ತಾರೆ ಎಂಬ ದೂರುಗಳು ಬಂದಿದ್ದವು. ಈ ಹಿನ್ನೆಲೆಯಲ್ಲಿ ಸಿಬ್ಬಂದಿಯೊಂದಿಗೆ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕೆಲ ಪದಾರ್ಥಗಳನ್ನು ಖರೀದಿಸಿದಾಗ ದೂರಿನಲ್ಲಿ ಸತ್ಯಾಂಶವಿರುವುದು ಖಚಿತವಾಯಿತು.

ಕೂಡಲೇ ಅಂಗಡಿಯವರಿಗೆ ದಂಡ ವಿಧಿಸಿ ಎಚ್ಚರಿಕೆ ನೀಡಲಾಯಿತು ಎಂದು ಸ್ನೇಹ ಅವರು ತಿಳಿಸಿದರು. ಸಾರ್ವಜನಿಕರು ಏನೇ ವಸ್ತು ಖರೀದಿಸಿದರೂ ನಿಗದಿತ ದರಕ್ಕಿಂತ ಹೆಚ್ಚಿನ ಮೊತ್ತವನ್ನು ನೀಡಬಾರದು. ಯಾರಾದರೂ ಹೆಚ್ಚಿನ ಮೊತ್ತ ಪಡೆದರೆ ಕಾನೂನುಮಾಪನ ಶಾಸ್ತ್ರ ಇಲಾಖೆ ಅಥವಾ ನಮ್ಮ ಗಮನಕ್ಕೆ ತರಬೇಕು.

ಅಂಗಡಿಯವರು ಸಹ ದುರಾಸೆಗೆ ಬಿದ್ದು ಗ್ರಾಹಕರಿಂದ ಹೆಚ್ಚಿನ ಹಣ ವಸೂಲಿ ಮಾಡಬಾರದು ಎಂದು ಸಲಹೆ ನೀಡಿದರು. ಇನ್ಸ್‌ಪೆಕ್ಟರ್ ಸಂದೀಪ್ ಕುಮಾರ್ ಹಾಗೂ ಇತರರು ಕಾರ್ಯಾಚರಣೆ ತಂಡದಲ್ಲಿದ್ದರು.

## ಪ್ರಜಾಪ್ರಭುತ್ವ ದುರ್ಬಲವಾಗಿದ್ದು, ಶಿಥಿಲಾವಸ್ಥೆಯಲ್ಲಿದೆ : ಕವಿ ಚೆನ್ನಸ್ವಾಮಿ

• ಉದಯವಾಹಿನಿ, ಮೈಸೂರು

ಜಾತಿ ವ್ಯವಸ್ಥೆಯು ಇಂದಿಗೂ ಜಾರಿಯಲ್ಲಿರುವ ಕಾರಣದಿಂದ ದೇಶದಲ್ಲಿ ಪ್ರಜಾಪ್ರಭುತ್ವ ದುರ್ಬಲವಾಗಿದ್ದು, ಶಿಥಲವಾದ ಸ್ಥಿತಿಯಲ್ಲಿದೆ' ಎಂದು ಕವಿ ಮೂಡ್ನಾಕೂಡು ಚಿನ್ನಸ್ವಾಮಿ ಕಳವಳ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ಇಲ್ಲಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕಾವೇರಿ ಸಭಾಂಗಣದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಹಾಗೂ ಸಂಶೋಧನಾ ಕೇಂದ್ರದಿಂದ 'ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಸಮಕಾಲೀನ ಭಾರತ ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ ಹಾಗೂ ಒಳಗೊಳ್ಳುವ ಅಭಿವೃದ್ಧಿ ಮರುಚಿಂತನೆ' ವಿಷಯದ ಕುರಿತು ಬುಧವಾರದಿಂದ ಆಯೋಜಿಸಿರುವ ರಾಷ್ಟ್ರಮಟ್ಟದ ಎರಡು ದಿನಗಳ ವಿಚಾರಸಂಕಿರಣದಲ್ಲಿ ಪ್ರಧಾನ ಭಾಷಣ ಮಾಡಿದರು. ದೇಶದಲ್ಲಿ ಒಳ್ಳೆಯ ಸಂವಿಧಾನ ಇದೆ, ಅದು ತೋರಿರುವ ದಾರಿಯೂ ಅದ್ಭುತವಾಗಿದೆ. ಆದರೆ, ನಮ್ಮಲ್ಲಿನ ಕೆಲವು ಮೂಲಭೂತ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಇಂದಿನವರೆಗೂ ಸಾಧ್ಯವಾಗಿಲ್ಲ. ಇದರಿಂದ ಪ್ರಜಾಪ್ರಭುತ್ವ ಕುಂಟುಕುದುರೆಯಾಗಿ ನಡೆಯುತ್ತಿದ್ದು, ಅನುಷ್ಠಾನದಲ್ಲಿ ಕುಂಟುತ್ತಿದೆ' ಎಂದರು.

**ಜಾತಿ ವ್ಯವಸ್ಥೆಯಿಂದ:** ಮೂಲಭೂತವಾದ ಸಮಸ್ಯೆಯಲ್ಲಿ ಪ್ರಮುಖವಾದುದು ಜಾತಿ ವ್ಯವಸ್ಥೆ. ಅದು ಹಾಗೂ ಪ್ರಜಾಪ್ರಭುತ್ವ ಎಣ್ಣೆ ಸೀಗೆಕಾಯಿ ಇದ್ದಂತೆ, ಎಂದಿಗೂ ಅವು ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ' ಎಂದು ಹೇಳಿದರು.

ಸಂವಿಧಾನದ ಹಲವು ಕಲಂಗಳು ಅನುಷ್ಠಾನ ಇಂದಿಗೂ ಸಾಧ್ಯವಾಗಿಲ್ಲ. ಆದ್ದರಿಂದಲೇ ಇಂದಿಗೂ ಅಸಮಾನತೆ ಇದೆ. ಭ್ರಾತೃತ್ವ ಇಂದಿಗೂ ಬಂದಿಲ್ಲ. ಜಾತಿ ವ್ಯವಸ್ಥೆಗೆ ಪೋಷಣೆ ಹಿಂದಿನಿಂದಲೂ ಇದೆ. ಈಗಲೂ ಇದೆ' ಎಂದರು. 'ಈಗ, ಬಂಡವಾಳಶಾಹಿ ಹಾಗೂ ಬಲಪಂಥೀಯ ಪ್ರಜಾಪ್ರಭುತ್ವ ಇದೆ. ಕೋಮುವಾದ ಹಾಗೂ ಜಾತಿವಾದ ಜಾಸ್ತಿ ಇದೆ. ಕಳೆದೊಂದು ದಶಕದಿಂದ ಹಿಂದುತ್ವ ರಾಜಕಾರಣ ಚಾಲ್ತಿಯಲ್ಲಿದೆ. ನಾವು ಮತ್ತು ಅವರು ಎಂಬ ಬೇರೆಯಾಗಿಸುವ ಧೋರಣೆ ನಡೆಯುತ್ತಲೇ ಇದೆ.

ಎಸ್‌ಐಆರ್ ಮೂಲಕ ಕೋಟಿಗಟ್ಟಲೆ ಮತದಾರರನ್ನು ಹೊರಗಡೆ ಹಾಕುವುದು ಉದ್ದೇಶಪೂರ್ವಕವಾಗಿಯೇ ನಡೆಯುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ.

## ಮತದಾನದ ಹಕ್ಕು ರಕ್ಷಿಸಲು ಪ್ರಜ್ಞಾವಂತ ನಾಗರಿಕ ವೇದಿಕೆ ಆಗ್ರಹ

• ಉದಯವಾಹಿನಿ, ಮೈಸೂರು

ದಾಖಲೆಗಳ ಕೊರತೆಯ ಕಾರಣಕ್ಕೆ ಯಾರ ಹೆಸರನ್ನೂ ಮತದಾರರ ಪಟ್ಟಿಯಿಂದ ತೆಗೆಯದಂತೆ ಅಗತ್ಯ ಕ್ರಮ ಕೈಗೊಂಡು, ಮತದಾನದ ಹಕ್ಕು ರಕ್ಷಿಸಬೇಕು ಎಂದು ಒತ್ತಾಯಿಸಿ ಪ್ರಜ್ಞಾವಂತ ನಾಗರಿಕ ವೇದಿಕೆಯ ಪದಾಧಿಕಾರಿಗಳು ಇಲ್ಲಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿಷ್ಟಾಚಾರ ವಿಭಾಗದ ತಹಶೀಲ್ದಾರ್ ಎಸ್. ಶಿವಪ್ರಸಾದ್ ಅವರಿಗೆ ಬುಧವಾರ ಮನವಿ ಸಲ್ಲಿಸಿದರು. 'ಚುನಾವಣಾ ಆಯೋಗ ನಿಗದಿಪಡಿಸಿರುವ 11 ದಾಖಲೆಗಳ ಪೈಕಿ ಒಂದು ದಾಖಲೆಯನ್ನೂ ಒದಗಿಸಲು ಸಾಧ್ಯವಿಲ್ಲವೋ ಅಂಥವರಿಗೆ ಜನನ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಕಾಯಂ ವಾಸಸ್ಥಳ ದೃಢೀಕರಣ ಪತ್ರ ಮೊದಲಾದ ದಾಖಲೆಗಳನ್ನು ಪಡೆದುಕೊಳ್ಳಲು ಸಾಧ್ಯವಾಗುವಂತೆ ನಿಯಮ ಸರಳಗೊಳಿಸಬೇಕು.

## ವಿಶ್ವಪರಿಸರ ದಿನಾಚರಣೆ : ಸಾಲುಮರದ ತಿಮ್ಮಕ್ಕನವರ ಸ್ಮರಣೆ

• ಉದಯವಾಹಿನಿ, ಗುಂಡ್ಲುಪೇಟೆ

ಕರ್ನಾಟಕ ರಾಜ್ಯ ಮೂಲಭೂತ ಹಕ್ಕುಗಳ ರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸಮಿತಿ ವತಿಯಿಂದ ಆಚರಿಸಲಾದ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ವೃಕ್ಷಮಾತೆ ಸಾಲುಮರದ ತಮ್ಮಕ್ಕರವರನ್ನ ಸ್ಮರಣೆ ಮಾಡಲಾಯಿತು.


ಸಮಿತಿಯ ಕೇಂದ್ರ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವೃಕ್ಷಮಾತೆಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ಸಲ್ಲಿಸಲಾಯಿತು. ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷೆ ಲಕ್ಷ್ಮಿ ಮಹೇಶ್ ಮಾತನಾಡಿ ಪರಿಸರ ದಿನಾಚರಣೆದಂದು ಕಡ್ಡಾಯವಾಗಿ ಸಾಲುಮರದ ತಿಮ್ಮಕ್ಕನವರ ಭಾವಚಿತ್ರವನ್ನಿರಿಸಿ ಗೌರವ ಸಲ್ಲಿಸುವಂತೆ ಆದೇಶಿಸಬೇಕು ಆಗಿದ್ದಲ್ಲಿ ಮಾತ್ರವೇ ಹಸಿರು ಸೃಷ್ಟಿ ಹರಿಕಾರ್ತಿಗೆ ನೀಡುವ ಬಹು ದೊಡ್ಡ ಕಾಣಿಕೆಯಾಗುತ್ತದೆ ಎಂದು ಮನವಿ ಮಾಡಿದರು. ಇದೆ ವೇಳೆ ಸಮಿತಿಯ ನೂತನ ಪದಾಧಿಕಾರಿಗಳನ್ನ ಆಯ್ಕೆ ಮಾಡಲಾಯಿತು, ಜಿಲ್ಲಾಧ್ಯಕ್ಷ ಸುಪ್ರೀತ್ ಕುಮಾರ್ ಹಾಗೂ ಗೌರವಾಧ್ಯಕ್ಷ ಬೆಳವಾಡಿ ರಾಜಪ್ಪ ಮಂಜುನಾಥ್ ಅವರ ಸಲಹೆಯ ಮೇರೆಗೆ ಉಪಾಧ್ಯಕ್ಷ ಸ್ಥಾನಕ್ಕೆ ಶಿವಕುಮಾರ್ ಬಲಚವಾಡಿ, ಚಾಮರಾಜನಗರ ತಾಲ್ಲೂಕ ಘಟಕ ಅಧ್ಯಕ್ಷರನ್ನಾಗಿ ಪುನೀತ್, ಕಾರ್ಯದರ್ಶಿ ವಿಜಯ್, ಉಪಾಧ್ಯಕ್ಷ ಸಿದ್ದರಾಜು, ಶಿವಪ್ರಸಾದ್, ಹರವೇ ಹೋಬಳಿ ಘಟಕ ಅಧ್ಯಕ್ಷರಾಗಿ ಮಮತಾರನ್ನ ನೇಮಕ ಮಾಡಲಾಯಿತು. ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಶ್ವ ಕೆ.ಪಿ. ರಾಜ್ಯ ಸಹಕಾರ್ಯದರ್ಶಿ ಮಾದೇಶ್, ರಾಮು, ಮಲ್ಲೇಶ್, ಇಂದಿರಾ, ಶಾಂತಮಲ್ಲಪ್ಪ, ಶಂಕರಪ್ಪ, ಶೇಖರ್, ಉತ್ತರಾಜಮ್ಮ ಇತರರು ಹಾಜರಿದ್ದರು.


ಉದಯವಾಹಿನಿ ಚಿತ್ರ

## ಬಿಡದಿ ಟೌನ್ ಷಿಪ್ ವಿಚಾರ : ರೈತರ ಸಮ್ಮುಖದಲ್ಲಿಯೆ ಚರ್ಚೆಗೆ ಸಿಎಂಗೆ ಜೆಡಿಎಸ್ ಆಹ್ವಾನ

### ಬಿಡದಿ ಸುತ್ತಮುತ್ತಲ ರೈತರನ್ನು ಒಕ್ಕಲೆಬ್ಬಿಸುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿದ್ದು, ರೈತರು ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ಪೀಳಿಗೆ ದೊಡ್ಡ ಸಮಸ್ಯೆ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಬಿಡದಿ ಟೌನ್ ಷಿಪ್ ವಿಚಾರವಾಗಿ ಚರ್ಚಿಸಲು ಜೂ.26 ರಂದು ವಿಧಾನಸೌಧಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಆಹ್ವಾನ ನೀಡಿರುವುದನ್ನು ಸ್ವಾಗತಿಸಿರುವ ಕೇಂದ್ರ ಸಚಿವ ಎಚ್.ಡಿಕುಮಾರಸ್ವಾಮಿ ಅವರು ರೈತರ ಸಮಸ್ಯೆಗಳನ್ನು ರೈತರ ಮುಂದೆಯೇ ಚರ್ಚೆ ನಡೆಸಲು ಜೂ.27 ರಂದು ಬೈರಮಂಗಲಕ್ಕೆ ಸಿಎಂ ಅವರನ್ನು ಆಹ್ವಾನಿಸುತ್ತಿದ್ದೇವೆ ಎಂದು ಶಾಸಕ ಎ.ಮಂಜುನಾಥ್ ಪಂಥಾಹ್ವಾನ ನೀಡಿದ್ದಾರೆ.

ಬಿಡದಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಜೂ.26 ರಂದು ಐದು ಜನ ರೈತ ಮುಖಂಡರೊಂದಿಗೆ ವಿಧಾನಸೌದಕ್ಕೆ ಬರಲು ಆಹ್ವಾನ ನೀಡಿದ್ದು, ಅದೇ ದಿನ ಪೂರ್ವನಿಯೋಜಿತ ಕಾರ್ಯಕ್ರಮ ಇರುವುದರಿಂದ ಜೂ.27 ರಂದು ಕುಮಾರಸ್ವಾಮಿ ಅವರು ಬೈರಮಂಗಲಕ್ಕೆ ಬರಲು ತೀರ್ಮಾನಿಸಿದ್ದು ಮುಖ್ಯಮಂತ್ರಿಗಳು ಸಹ ಬಂದು ರೈತರ ಮುಂದೆ ಚರ್ಚಿಸಲಿ ಎಂದು ಸವಾಲು ಹಾಕಿದರು. ಶಾಸಕ ಎಚ್.ಸಿ.ಬಾಲಕೃಷ್ಣ ಅವರು, ಎಚ್.ಡಿ.ಕುಮಾರಸ್ವಾಮಿ ಅವರಿಗೆ ಕನಿಷ್ಠ ಜ್ಞಾನ ಇಲ್ಲ ಎಂದು ಮಾತನಾಡಿರುವುದು ಅವರ ಸಂಸ್ಕೃತಿಗೆ ಹಿಡಿದ ಕೈಗನ್ನಡಿಯಾಗಿದೆ. ರೈತರ ಪರ ನಿಲ್ಲಬೇಕಾದ ಅವರು ಮುಖ್ಯಮಂತ್ರಿ ಡಿ.ಕೆ.ಶಿಕುಮಾರ್ ಅವರನ್ನು ದಾರಿ ತಪ್ಪಿಸಿದ್ದಾರೆ. ಮುಖ್ಯಮಂತ್ರಿಗಳಿಗೆ ಕೆಟ್ಟ ಹೆಸರು ತರಲು ಚಿತಾವಣೆ ನಡೆಸಿದ್ದಾರೆ ಎಂದು ಆರೋಪಿಸಿದರು.

ಬಹಿರಂಗ ಚರ್ಚೆಗೆ ಕರೆದ ಶಾಸಕ ಬಾಲಕೃಷ್ಣ ಇದೀಗ ಕಾನೂನು ಸಮಸ್ಯೆ ಆಗುತ್ತದೆ ಎಂದು ತಪ್ಪಿಸಿಕೊಳ್ಳುತ್ತಿದ್ದಾರೆ ಎಂದು ಆಕ್ರೋಷ ವ್ಯಕ್ತಪಡಿಸಿದ ಅವರು, ಮಧ್ಯರಾತ್ರಿಯಲ್ಲಿ ಕುಮಾರಸ್ವಾಮಿ ವಿರುದ್ಧ ಪೋಸ್ಟರ್ ಅಂಟಿಸುತ್ತಿದ್ದು ಈ ಬಗ್ಗೆ ಪೊಲೀಸರು ತಕ್ಷಣ ಕ್ರಮ ತೆಗೆದುಕೊಳ್ಳದಿದ್ದರೆ ಜೆಡಿಎಸ್ ಕಾರ್ಯಕರ್ತರು ಹಗಲಿನಲ್ಲಿಯೇ ಡಿಸಿ ಕಚೇರಿ ಕಾಂಪೌಂಡ್ ಗೋಡೆಗೆ ಇವರ ಬಗ್ಗೆ ಪೋಸ್ಟರ್ ಅಂಟಿಸಬೇಕಾಗುತ್ತದೆ ಎಂದು ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಬಿಡದಿ ಸುತ್ತಮುತ್ತಲ ರೈತರನ್ನು ಒಕ್ಕಲೆಬ್ಬಿಸುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿದ್ದು, ರೈತರು ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ಪೀಳಿಗೆ ದೊಡ್ಡ ಸಮಸ್ಯೆ ಎದುರಿಸಬೇಕಾಗುತ್ತದೆ. ನಿಮ್ಮ ಮಕ್ಕಳ ಭವಿಷ್ಯದ ಬಗ್ಗೆ ಯೋಚಿಸಿ ತಮ್ಮ ಪೂರ್ವಜರ ಭೂಮಿ ಉಳಿಸಿಕೊಳ್ಳಬೇಕೆಂದು ರೈತರಲ್ಲಿ ಮನವಿ ಮಾಡಿದರು. ಟೌನ್ ಷಿಪ್ ವಿಚಾರಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ನಾಗರಭಾವಿಯ ಖಾಸಗಿ ಸ್ಥಳದಲ್ಲಿ ಜಿಬಿಡಿಎ ಅಧ್ಯಕ್ಷರು ಮತ್ತು ಆಯುಕ್ತರು ಕೆಲಸ ಮಾಡುತ್ತಿದ್ದಾರೆ.

ಇದು ರೈತರಿಗೆ ತಿಳಿಯುತ್ತಿದ್ದಂತೆ ಜಾಗವನ್ನು ಬದಲಾಯಿಸಿದ್ದರೆ. ಕಾಂಗ್ರೆಸ್ ಮುಖಂಡರು ತಮ್ಮ ಕುಟುಂಬದವರ ಹೆಸರಿನಲ್ಲಿ ಬೇನಾಮಿ ಆಸ್ತಿಯನ್ನು ಮಾಗಡಿಯಲ್ಲಿ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನೊಂದಣಿ ಮಾಡಿಸಿದ್ದು ಇದರ ಬಗ್ಗೆ ತನಿಖೆ ನಡೆಯಲಿ ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿಗಳು ಅನುಮತಿ ನೀಡಿದರೆ ಯಾವುದೆ ಒಂದು ಅಹಿತಕರ ಘಟನೆ ನಡೆಯದಂತೆ ರೈತರ ಸಮ್ಮುಖದಲ್ಲಿ ಸಭೆ ನಡೆಸಲು ವೇದಿಕೆ ಸಿದ್ದಪಡಿಸಲಾಗುವುದು ಎಂದು ಎ.ಮಂಜು ಹೇಳಿದರು.

## ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಬೇಕು


### ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ನಡೆದ ಶಿಕ್ಷಣ ಸಂಜೀವಿನಿ ಕಾರ್ಯಕ್ರಮಕ್ಕೆ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಚಾಲನೆ

• ಉದಯವಾಹಿನಿ, ಚನ್ನಪಟ್ಟಣ

ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಬೇಕು. ಇದರಿಂದ ಪ್ರಭಾವಿತರಾಗಿ ಮಾದರಿ ಸಮಾಜ ನಿರ್ಮಾಣಕ್ಕೆ ನೆರವಾಗಲಿದೆ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು. ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಹನುಮಪುರದೊಡ್ಡಿ ಮರಿಗೌಡ ಚಾರಿಟಬಲ್ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ 'ಶಿಕ್ಷಣ ಸಂಜೀವಿನಿ' ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ತಾಲ್ಲೂಕಿನ ಸರ್ಕಾರಿ ಶಾಲೆಗಳ ಮಕ್ಕಳಿಗೆ ಬ್ಯಾಗ್, ಶೈಕ್ಷಣಿಕ ಪರಿಕರಗಳ ವಿತರಿಸಿ, ಪ್ರತಿಭಾ ಪುರಸ್ಕಾರ ನೀಡಿ ಆಶೀರ್ವಚನ ನೀಡಿದರು.

ನಾಡಿನ ಆಸ್ತಿಯಾಗಿರುವ ಮಕ್ಕಳ ಸೇವಾ ಕಾರ್ಯ ಮಾಡುವುದು ನಿಜಕ್ಕೂ ಪ್ರಶಂಸನೀಯ. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪ್ರೋತ್ಸಾಹ ನೀಡುತ್ತಿರುವುದು ಒಳ್ಳೆಯ ಬೆಳವಣಿಗೆ. ದಾನಿಗಳು ಸರ್ಕಾರಿ ಶಾಲೆಗಳ ಪ್ರತಿಭಾವಂತ ಮಕ್ಕಳನ್ನು ಗುರುತಿಸುವುದರಿಂದ ಸರ್ಕಾರಿ ಶಾಲೆಗಳ ಬೆಳವಣಿಗೆಯಾಗುತ್ತದೆ ಎಂದರು. ಪಟ್ಟನಾಯಕನಹಳ್ಳಿ ಗುರುಗುಂಡ ಬ್ರಹ್ಮೇಶ್ವರ ಮಠದ ನಂಜಾವಧೂತ ಸ್ವಾಮೀಜಿ, 'ಮಕ್ಕಳಿಗೆ ವಿದ್ಯೆ ಜತೆಗೆ ಸಂಸ್ಕಾರ ಕಲಿಸಬೇಕು. ಸಂಸ್ಕಾರವಂತ ಮಕ್ಕಳು ಶ್ರೇಷ್ಠ ಸಮಾಜ ಕಟ್ಟುತ್ತಾರೆ. ಮಕ್ಕಳು ತಮ್ಮಲ್ಲಿರುವ ಪ್ರತಿಭೆಯನ್ನು ಸಮಾಜದ ಪ್ರಗತಿಗೆ ಬಳಕೆ ಮಾಡಬೇಕು' ಎಂದು ಕಿವಿಮಾತು ಹೇಳಿದರು.

ಆದಿಚುಂಚನಗಿರಿ ಅರ್ಚಕರಹಳ್ಳಿ ಶಾಖಾ ಮಠದ ಅನ್ನದಾನೇಶ್ವರನಾಥ ಸ್ವಾಮೀಜಿ, ಗೌಡಗೆರೆ ಚಾಮುಂಡೇಶ್ವರಿ ಕ್ಷೇತ್ರದ ಮಲ್ಲೇಶ್ ಗುರೂಜಿ, ಬಸವನಗುಡಿ ಕ್ಷೇತ್ರದ ಶಾಸಕ ರವಿ ಸುಬ್ರಹ್ಮಣ್ಯ, ಟ್ರಸ್ಟ್ ಸಂಸ್ಥಾಪಕ ಎಚ್.ಎಂ.ನಾಗೇಶ್, ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಜಯಮುತ್ತು, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಆನಂದಸ್ವಾಮಿ, ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಗೋವಿಂದಹಳ್ಳಿ ನಾಗರಾಜು, ಮುಖಂಡರಾದ ಹಾಪ್ ಕಾಮ್ಸ್ ದೇವರಾಜು, ಸಿ.ಪಿ.ರಾಜೇಶ್, ಡಿಎಂಕೆ ಕುಮಾರ್, ಹುಲುವಾಡಿ ದೇವರಾಜು, ರೈತ ಸಂಘದ ಮುಖಂಡ ಸಿ.ಪುಟ್ಟಸ್ವಾಮಿ, ಕಸ್ತೂರಿ ಕರ್ನಾಟಕ ಜನಪರ ವೇದಿಕೆ ಅಧ್ಯಕ್ಷ ರಮೇಶ್ ಗೌಡ ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

**ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಬೇಕು. ಶಿಕ್ಷಣ, ಸಂಸ್ಕೃತಿಯೇ ಬದುಕಿನ ರಕ್ಷಾಕವಚ. ಶಿಕ್ಷಣವೇ ಸಮಾಜದ ಪರಿವರ್ತನೆ, ರಾಷ್ಟ್ರ ನಿರ್ಮಾಣಕ್ಕೆ ಪರಿಣಾಮಕಾರಿ ಸಾಧನವಾಗಿದೆ.**

ಡಾ.ಸಿ.ಎನ್.ಮಂಜುನಾಥ್ ಸಂಸದ

